ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
EMAIL : dairyadadaari@gmail.com
ಸಂಪುಟ: 01 ಸಂಚಿಕೆ: 84
ಬೆಲೆ ರೂ : 2.00
ರಾಯಚೂರು
ಪುಟ: 4
RNI NO: KNKAN/25/A2795
ಶನಿವಾರ: 07-03-2026

**SEHRI & IFTARI TIME**
DAY :SATURDAY
RAMZAN : 17
DATE: 07.03.2026
END TIME OF SEHRI :5:19 AM
FAJAR AZAAN : 5:24 AM

IFTAR TIME : 6:32 PM

ಸೈಯದ್ ಅಹ್ಮದ್ ಹುಸೇನಿ ಮತ್ ವಾಲೆ
ಕಾರ್ಯದರ್ಶಿಗಳು : ಮತ್ ವಾಲೆ ಸಾಹೇಬ್ ಪಬ್ಲಿಕ್ ಸ್ಕೂಲ್ ಮಾನ್ವಿ
ಸಂಪಾದಕರು : ಧೈರ್ಯದ ದಾರಿ ಕನ್ನಡ ದಿನಪತ್ರಿಕೆ



ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ದಾಖಲೆಯ 17ನೇ ಬಜೆಟ್ ಮಂಡಿಸಿದ ಸಿಎಂ ಸಿದ್ದರಾಮಯ್ಯ

## ಬಜೆಟ್ ಹೈಲೈಟ್ಸ್ : ಕೃಷಿ ಕ್ಷೇತ್ರಕ್ಕೆ ಸಿಕ್ಕಿದ್ದೇನು..?




**ಬೆಂಗಳೂರು,ಮಾ.6–** ಧರೆಯು ಕೃಷಿ ಶುದ್ಧವಾಗಿಯಲ್ಲದೆ, ಸಸಿ ಶುದ್ಧವಿಲ್ಲ ಎಂಬ ವಚನಕಾರ ಶಿವಲೆಂಕ ಮಂಚಣ್ಣ ಸಾಲುಗಳೊಂದಿಗೆ ಕೃಷಿ ಬಜೆಟ್ ಮಂಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರೈತ ಸಮೃದ್ಧನಾದರೆ ಕರ್ನಾಟಕ ಸಮೃದ್ಧವಾಗುತ್ತದೆ ಎಂಬ ಆಶಯದೊಂದಿಗೆ ಕೃಷಿ ಕ್ಷೇತ್ರಕ್ಕೆ ಹಲವು ಮಹತ್ವದ ಯೋಜನೆಗಳನ್ನು ಬಜೆಟ್‌ನಲ್ಲಿ ಘೋಷಿಸಿದ್ದಾರೆ.
ಬೀಜದಿಂದ ಮಾರುಕಟ್ಟೆಯವರೆಗೆ ರೈತರಿಗೆ ಬೆಂಬಲ ನೀಡುವ ಉದ್ದೇಶದಿಂದ ಈ ಬಾರಿಯ ಬಜೆಟ್‌ನಲ್ಲಿ ತಂತ್ರಜ್ಞಾನ, ಮಾರುಕಟ್ಟೆ ವಿಸ್ತರಣೆ ಹಾಗೂ ಸಾವಯವ ಕೃಷಿಗೆ ಹೆಚ್ಚಿನ ಒತ್ತು ನೀಡಲಾಗಿದೆ.

**ಮುಖ್ಯಮಂತ್ರಿ ಕೃಷಿ ವಿಸ್ತಾರ ಯೋಜನೆ:** ಉತ್ಪಾದನೋತ್ತರ ಕೃಷಿ ಚಟುವಟಿಕೆಗಳಾದ ಸಂಸ್ಕರಣೆ, ಮತ್ತು ಮಾರುಕಟ್ಟೆ ಸಂಪರ್ಕ ಕಲ್ಪಿಸಿ ರೈತರಿಗೆ ಹೆಚ್ಚುವರಿ ಆದಾಯ ತಂದುಕೊಡಲು ಮುಂದಿನ ಮೂರು ವರ್ಷಗಳಲ್ಲಿ 100 ಕೋಟಿ ರೂ. ವೆಚ್ಚದಲ್ಲಿ ಮುಖ್ಯಮಂತ್ರಿ ಕೃಷಿ ವಿಸ್ತಾರ ಯೋಜನೆ ಜಾರಿಗೆ ತರಲಾಗುವುದು. ಕೃಷಿಕರಿಗೆ ಕೀಟಗಳ ವಿರುದ್ಧ ಸಹಾಯ ಮಾಡುವ ಉದ್ದೇಶದಿಂದ ಮುಂದಿನ ಮೂರು ವರ್ಷಗಳ ಕಾಲ ಸಸ್ಯ ಸಂಜೀವಿನಿ ಯೋಜನೆಯನ್ನು ಪ್ರಾರಂಭಿಸಲಾಗುತ್ತದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

ಇದರ ಜೊತೆಗೆ, ಪಶುವೈದ್ಯಕೀಯ ಕಾಲೇಜುಗಳಲ್ಲಿ ಸಿಟಿ ಸ್ಕ್ಯಾನಿಂಗ್ ಯಂತ್ರಗಳನ್ನು ಸ್ಥಾಪಿಸಲು ಸರ್ಕಾರ ನಿರ್ಧರಿಸಿದ್ದು, ಬೆಳಗಾವಿ ಮತ್ತು ಬೆಂಗಳೂರಿನ ಪಶುವೈದ್ಯಕೀಯ ಕಾಲೇಜುಗಳಲ್ಲಿ ಅಳವಡಿಸಲಾಗುತ್ತದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

**ಎಐ ಆಧಾರಿತ ರೈತ ಕರೆ ಕೇಂದ್ರ:** ರೈತರಿಗೆ ಹವಾಮಾನ, ಮಾರುಕಟ್ಟೆ ದರ, ಕೃಷಿ ತಾಂತ್ರಿಕತೆ ಮತ್ತು ಇಲಾಖಾ ಒಂದೇ ಸೂರಿನಡಿ ತ್ವರಿತವಾಗಿ ಒದಗಿಸಲು ಕೃಷಿ ಇಲಾಖೆಯ ರೈತ ಕರೆ ಕೇಂದ್ರವನ್ನು ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನದೊಂದಿಗೆ ಉನ್ನತೀಕರಿಸಲಾಗುವುದು.

ಮಣ್ಣಿನಲ್ಲಿ ಸಾವಯವ ಇಂಗಾಲ ಮತ್ತು ಭೌತಿಕ, ರಾಸಾಯನಿಕ ಗುಣಮಟ್ಟ ಹೆಚ್ಚಿಸಲು ಹಾಗೂ ಪರಿಸರ ಸುಸ್ಥಿರ ಕೃಷಿ ಪದ್ಧತಿ ಉತ್ತೇಜಿಸಲು ಮುಂದಿನ 3 ವರ್ಷಗಳಲ್ಲಿ ಜೀವಸುಧಾಮೃತ ಎಂಬ ಹೊಸ ಕಾರ್ಯಕ್ರಮ ಜಾರಿಗೊಳಿಸಲಾಗುವುದು.
**ಕೋಲಾರದಲ್ಲಿ ಎಂಎಸ್‌ಐಎಲ್ ರೈತ ಮಾಲ್:**ರೈತರಿಗೆ ಗುಣಮಟ್ಟದ ಬೀಜ, ರಸಗೊಬ್ಬರ, ಕೀಟನಾಶಕ ಮತ್ತು ಯಂತ್ರೋಪಕರಣಗಳು ಒಂದೇ ಸೂರಿನಡಿ ಕೈಗೆಟುಕುವ ದರದಲ್ಲಿ ಸಿಗುವಂತೆ ಮಾಡಲು, ಪ್ರಾಯೋಗಿಕವಾಗಿ ಕೋಲಾರ ಜಿಲ್ಲೆಯ ಪ್ರತಿಯೊಂದು ತಾಲೂಕಿನಲ್ಲಿರೈತ ಮಾಲ್‌ಗಳನ್ನು ಸ್ಥಾಪಿಸಲಾಗುವುದು. 2ನೇಪುಟಕ್ಕೆ

## ಬಜೆಟ್‌ನಲ್ಲಿ ಹೊಸ ಅಬಕಾರಿ ನೀತಿ ಘೋಷಣೆ



**ಬೆಂಗಳೂರು, ಮಾ. 6–** ರಾಜ್ಯದಲ್ಲಿ ಮದ್ಯದ ಬೆಲೆಯನ್ನು ನಿಗದಿಗೊಳಿಸುವುದನ್ನು ಸರ್ಕಾರದಿಂದ ಮುಕ್ತಗೊಳಿಸಲಾಗುವುದು. ಈ ಸಂಬಂಧ ಹೊಸ ಅಬಕಾರಿ ನೀತಿಯನ್ನು ಜಾರಿಗೊಳಿಸುವ ಘೋಷಣೆಯನ್ನು ಬಜೆಟ್‌ನಲ್ಲಿ ಮಾಡಲಾಗಿದೆ.
ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇಂದು ಮಂಡಿಸಿರುವ ಬಜೆಟ್‌ನಲ್ಲಿ ಮುಂದಿನ 3 ರಿಂದ 4 ವರ್ಷಗಳಲ್ಲಿ ಎಲ್ಲಾ ಪಾನೀಯಗಳ ಮೇಲೆ ಏಕರೂಪವಾಗಿ ಅನ್ವಯಿಸುವಂತೆ ಪ್ರತಿ ಲೀಟರ್‌ನಲ್ಲಿ ಮದ್ಯದ ಅಂಶವನ್ನು ಆಧರಿಸಿ ಅಬಕಾರಿ ಸುಂಕ ವಿಧಿಸುವ ಪ್ರಕ್ರಿಯೆಗೆ ಹಂತ ಹಂತವಾಗಿ ಪರಿವರ್ತನೆಗೊಳ್ಳಲಾಗುವುದು.

ಹೊಸ ನೀತಿಯಡಿ ಸರ್ಕಾರದಿಂದ ಮದ್ಯದ ಬೆಲೆ ನಿರ್ಧಾರವಾಗುವುದನ್ನು ಮುಕ್ತಗೊಳಿಸಲಾಗುವುದು. ಮಾರುಕಟ್ಟೆ ಪರಿಗಣನೆಗೆ ಆಧಾರದ ಮೇಲೆ ಮದ್ಯ ಉತ್ಪನ್ನಗಳನ್ನು ಸ್ಲ್ಯಾಬ್‌ಗಳಲ್ಲಿ ಇರಿಸುವ ಅಧಿಕಾರವನ್ನು ಸಂಪೂರ್ಣವಾಗಿ ಉತ್ಪಾದಕರಿಗೆ ನೀಡಲಾಗುವುದು. ದರ ನಿಗದಿ ಸ್ಲ್ಯಾಬ್‌ಗಳನ್ನು ತರ್ಕ ಬದ್ಧಗೊಳಿಸುವ ಸಲುವಾಗಿ ಪ್ರಸ್ತುತ ಇರುವ 16 ಸ್ಲ್ಯಾಬ್‌ಗಳನ್ನು 8 ಸ್ಲ್ಯಾಬ್‌ಗಳಿಗೆ ಇಳಿಸಲಾಗುವುದು ಎಂದು ಬಜೆಟ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.
ತೆರಿಗೆ ಸೋರಿಕೆಯನ್ನು ತಡೆಯಲು ತಂತ್ರಜ್ಞಾನ ಆಧಾರಿತ ಬ್ಲ್ಯಾಕ್‌ಚೈನ್ ಡಿಜಿಟಲ್ ಟ್ರ್ಯಾಕಿಂಗ್ ವ್ಯವಸ್ಥೆಯನ್ನು ಜಾರಿಗೆ ತರಲಾಗುವುದು. ಮದ್ಯ ರವಾನೆಗೆ ಬೆಂಗಾವಲು ವ್ಯವಸ್ಥೆಯ ಬದಲಿಗೆ ಜಿಯೋ–ಫೆನ್ಸಡ್ ಇ–ಲಾಕ್ ವ್ಯವಸ್ಥೆಯನ್ನು ಅಳವಡಿಸಲಾಗುತ್ತದೆ. ಈ ಕ್ರಮಗಳನ್ನು ರಿಯಲ್ ಟೈಮ್ ಮೇಲ್ವಿಚಾರಣೆಗೆ ಅವಕಾಶ ಕಲ್ಪಿಸುವ ಮೂಲಕ ಪಾರದರ್ಶಕತೆಯನ್ನು ಹೆಚ್ಚಿಸುತ್ತದೆ ಎಂದು ಅವರು ತಿಳಿಸಿದ್ದಾರೆ.

ಮದ್ಯ ವಲಯದಲ್ಲಿ ಪ್ರವಾಸದ್ಯೋಮವನ್ನು ಉತ್ತೇಜಿಸುವ ಸಲುವಾಗಿ ಡಿಸ್ಟಿಲರಿಗಳು ಮತ್ತು ರಿಟೇಲರ್‌ಗಳು ಪ್ರವಾಸಿಗರು ಮದ್ಯ ಸವಿಯಲು ಹಾಗೂ ತಮ್ಮ ಆವರಣದಲ್ಲಿ ತಯಾರಿಸಿದ್ದನ್ನು ಪ್ರವಾಸಿಗರಿಗೆ ಮಾರಾಟ ಮಾಡಲು ಅವಕಾಶ ನೀಡಲಾಗುವುದು.
2025–26ನೇ ಸಾಲಿನಲ್ಲಿ ಫೆಬ್ರವರಿ ತಿಂಗಳ ಅಂತ್ಯದವರೆಗೆ ಅಬಕಾರಿ ತೆರಿಗೆಯಿಂದ ಒಟ್ಟು 36 ಸಾವಿರದ 492 ಕೋಟಿ ರೂ.ಗಳ ರಾಜಸ್ವ ಸ್ವೀಕೃತವಾಗಿದ್ದು, ಕಳೆದ ಸಾಲಿಗೆ ಹೋಲಿಸಿದರೆ ಶೇ. 12.7 ರಷ್ಟು ಬೆಳವಣಿಗೆಯಾಗಿದೆ. 2026–26ನೇ 2ನೇಪುಟಕ್ಕೆ

## ಉದ್ಯೋಗಾಕಾಂಕ್ಷಿಗಳಿಗೆ ಬಜೆಟ್‌ನಲ್ಲಿ ಗುಡ್ ನ್ಯೂಸ್ ಕೊಟ್ಟ ಸಿಎಂ ಸಿದ್ದರಾಮಯ್ಯ

**ಬೆಂಗಳೂರು,ಮಾ.6–** ತಮ ದಾಖಲೆಯ 17ನೇ ಬಜೆಟ್ ಮಂಡನೆ ಮಾಡಿದ ಹಣಕಾಸು ಖಾತೆಯನ್ನು ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಸರ್ಕಾರಿ ಹುದ್ದೆಯ ಆಕಾಂಕ್ಷಿಗಳಿಗೆ ಸಿಹಿ ಸುದ್ದಿ ನೀಡಿದ್ದಾರೆ. ಪ್ರಮುಖ ಇಲಾಖೆಗಳಲ್ಲಿ ಖಾಲಿ ಇರುವ 56,432 ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಗೆ ಚಾಲನೆ ನೀಡಿದ್ದೇವೆ. ಉದ್ಯೋಗ ನೇಮಕಾತಿಗಳಲ್ಲಿ ನ್ಯಾಯಾಲಯದ ಪ್ರಕರಣಗಳಿಂದ ಉಂಟಾಗಿದ್ದ ವಿಳಂಬವನ್ನು ಪರಿಗಣಿಸಿ ವಯೋಮಿತಿಯಲ್ಲಿ ಒಂದು ಬಾರಿಗೆ 5 ವರ್ಷ ಸಡಿಲಿಕೆ ನೀಡಿದ್ದೇವೆ ಎಂದು ತಮ 2026–27ನೇ ಸಾಲಿನ ಬಜೆಟ್‌ನಲ್ಲಿ ಘೋಷಿಸಿದರು.

ಇತ್ತಿಚೆಗಷ್ಟೆ ವಿದ್ಯಾನಗರಿ ಧಾರವಾಡದಲ್ಲಿ ಸರ್ಕಾರಿ ಉದ್ಯೋಗಾಂ ಕಾಂಕ್ಷಿಗಳು ಹಾಗೂ ನಿರುದ್ಯೋಗಿ ಯುವಕರು ಬೀದಿಗಿಳಿದು ಬೃಹತ್ ಪ್ರತಿಭಟನೆ ನಡೆಸಿದ್ದರು. ಓದಿದ್ದರೂ ನೋಟಿಫಿಕೇಶನ್ ಇಲ್ಲದೆ ವಯಸ್ಸು ಮೀರಿ ಹೋಗುತ್ತಿದೆ, ಕೂಡಲೇ ನೇಮಕಾತಿ ಪ್ರಕ್ರಿಯೆ ಶುರು ಮಾಡಿ ಎಂದು ಆಗ್ರಹಿಸಿದ್ದರು.

# 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣಗಳ ಬಳಕೆ ನಿಷೇಧ ಕುರಿತು ಬಜೆಟ್‌ನಲ್ಲಿ ಪ್ರಸ್ತಾಪ

**ಬೆಂಗಳೂರು,ಮಾ.6–**ಸಾರ್ಟ್‌ಫೋನ್ ಮತ್ತು ಸಾಮಾಜಿಕ ಜಾಲತಾಣಗಳ ವ್ಯಸನದಿಂದ ಮಕ್ಕಳನ್ನು ಮುಕ್ತಗೊಳಿಸಲು ಕರ್ನಾಟಕ ಸರ್ಕಾರವು ಐತಿಹಾಸಿಕ ತೀರ್ಮಾನವೊಂದನ್ನು ಕೈಗೊಂಡಿದೆ. ವಿಧಾನಸಭೆಯಲ್ಲಿ ಪ್ರಸಕ್ತ ಸಾಲಿನ ಬಜೆಟ್ ಮಂಡಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು, 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣಗಳ ಬಳಕೆಯನ್ನು ನಿಷೇಧಿಸುವ ಬಗ್ಗೆ ಪ್ರಸ್ತಾಪಿಸಿದ್ದು, ಈ ಕಾನೂನು ಜಾರಿಯಾದಲ್ಲಿ ಭಾರತದಲ್ಲೇ ಇಂಥ ಕಟ್ಟುನಿಟ್ಟಿನ ನಿಯಮ ತಂದ ಮೊದಲ ರಾಜ್ಯ ಎಂಬ ಹೆಗ್ಗಳಿಕೆಗೆ ಕರ್ನಾಟಕ ಪಾತ್ರವಾಗಲಿದೆ.

ಮೊಬೈಲ್ ಮತ್ತು ಡಿಜಿಟಲ್ ವ್ಯಸನದಿಂದ ಮಕ್ಕಳಲ್ಲಿ ಆರೋಗ್ಯ ಸಮಸ್ಯೆಗಳು, ಮಾನಸಿಕ ಒತ್ತಡ, ಆತಹತ್ಯೆಯ ಭಾವನೆಗಳು, ಸಾಮಾಜಿಕ ಸಂಬಂಧಗಳಲ್ಲಿ ಕುಸಿತ ಹಿನ್ನೆಲೆಯಲ್ಲಿ ಈ ಕ್ರಮ ಅನಿವಾರ್ಯವಾಗಿದೆ. ಅಪ್ರಾಪ್ತ ಮಕ್ಕಳನ್ನು ಸೋಶಿಯಲ್ ಮೀಡಿಯಾ ದುರುಪಯೋಗದಿಂದ ರಕ್ಷಿಸಿ, ಅವರ ಆರೋಗ್ಯ, ಶಿಕ್ಷಣ ಮತ್ತು ಭವಿಷ್ಯವನ್ನು ಕಾಪಾಡುವುದು ಇದರ ಮುಖ್ಯ ಉದ್ದೇಶವಾಗಿದೆ.
ಸರ್ಕಾರದ ಉದ್ದೇಶ ಮತ್ತು ಜಾರಿ ಸರ್ಕಾರವು ಈ ನಿಷೇಧವನ್ನು ಕೇವಲ ಕಾನೂನು ಮೂಲಕವಲ್ಲದೆ, ಡಿಜಿಟಲ್ ಡಿಟಾಕ್ಸಿಫಿಕೇಷನ್ ಮತ್ತು ಬಿಯಾಂಡ್ ಸ್ಕ್ರೀನ್ ಎಂಬ ಜಾಗೃತಿ ಕಾರ್ಯಕ್ರಮಗಳ ಮೂಲಕ ಯೋಜಿಸಿದೆ. ಶಾಲೆಗಳಲ್ಲಿ ಡಿಜಿಟಲ್ ಸಾಕ್ಷರತೆ, ಪೋಷಕರ ಜವಾಬ್ದಾರಿ ಮತ್ತು ಆರೋಗ್ಯ ತಜ್ಞರ ಸಲಹೆಗಳನ್ನು ಒಳಗೊಂಡಂತೆ ಸಮಗ್ರ ಕಾರ್ಯತಂತ್ರ ರೂಪಿಸಲಾಗುತ್ತಿದೆ ಎಂದು ತಿಳಿದುಬಂದಿದೆ.

ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆಯಿಂದ ಮಕ್ಕಳ ಏಕಾಗ್ರತೆ ಮತ್ತು ಮಾನಸಿಕ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುತ್ತಿದೆ ಎಂದು ಸರ್ಕಾರ ಆತಂಕ ವ್ಯಕ್ತಪಡಿಸಿದೆ. ಅಪ್ರಾಪ್ತರು ಆನ್‌ಲೈನ್ ಕಿರುಕುಳ, ಅಶ್ಲೀಲ ವಿಷಯಗಳು ಮತ್ತು ಸೈಬರ್ ವಂಚನೆಗಳಿಗೆ ಬಲಿಯಾಗುವುದನ್ನು ತಡೆಯುವುದು ಇದರ ಪ್ರಮುಖ ಉದ್ದೇಶವಾಗಿದೆ.
ವಯಸ್ಸಿನ ದೃಢೀಕರಣ ಕಡ್ಡಾಯದಿಂದ ಫೇಸ್‌ಬುಕ್, ಇನ್‌ಸ್ಟಾಗ್ರಾಮ್, ಎಕ್ಸ್ ನಂತಹ (ಟ್ವಿಟ್ಟರ್)ವೇದಿಕೆಗಳಿಗೆ ಲಾಗ್–ಇನ್ ಆಗುವಾಗ ಆಧಾರ್ ಅಥವಾ ಇತರ ಗುರುತಿನ ಚೀಟಿ ಮೂಲಕ ವಯಸ್ಸನ್ನು ಕಡ್ಡಾಯವಾಗಿ ದೃಢೀಕರಿಸಬೇಕಾಗುತ್ತದೆ. 16 ವರ್ಷದೊಳಗಿನ ಖಾತೆ ತೆರೆಯಲು ಅವಕಾಶ ನೀಡುವ ಕಂಪನಿಗಳ ಮೇಲೆ ಭಾರೀದಂಡ ವಿಧಿಸುವ ಅವಕಾಶ ಈ ಕಾನೂನಿನಲ್ಲಿದೆ. ಮಕ್ಕಳ ಡಿಜಿಟಲ್ ಚಟುವಟಿಕೆಗಳ ಮೇಲೆ ನಿಗಾ ಇಡಲು ಪೋಷಕರಿಗೆ ವಿಶೇಷ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಬಹುದು.
ಮಕ್ಕಳ ಮೆದುಳಿನ ಬೆಳವಣಿಗೆಯ ಹಂತದಲ್ಲಿ ಸೋಷಿಯಲ್ ಮೀಡಿಯಾದ ಪ್ರಚೋದನೆ ಅಪಾಯಕಾರಿ. ಈ ನಿಷೇಧವು ಮಕ್ಕಳನ್ನು ಸೃಜನಾತಕ ಚಟುವಟಿಕೆಗಳತ್ತ ಮರಳುವಂತೆ ಮಾಡುತ್ತದೆ ಎನ್ನುವುದು ಮನಶ್ಶಾಸ್ತ್ರಜ್ಞರು ಮತ್ತು ಶಿಕ್ಷಣ ತಜ್ಞರ ಅಭಿಪ್ರಾಯವಾಗಿದೆ.ತಂತ್ರಜ್ಞಾನವನ್ನು ಮಾತ್ರ ಸೀಮಿತಗೊಳಿಸಿ,




ಮನರಂಜನೆಯ ಹೆಸರಿನಲ್ಲಿ ನಡೆಯುವ ಸಮಯ ವ್ಯರ್ಥವನ್ನು ತಡೆಯಲು ಈ ಕ್ರಮ ಪೂರಕವಾಗಲಿದೆ. ಕರ್ನಾಟಕ ಸರ್ಕಾರವು ತಂತ್ರಜ್ಞಾನದ ಲಾಭ ಮತ್ತು ಹಾನಿಗಳ ನಡುವೆ ಸಮತೋಲನ ಕಾಯ್ದುಕೊಳ್ಳಲು ಈ ಹೆಜ್ಜೆ ಇಟ್ಟಿದೆ. ಇದು ಘೋಷಣೆಯಾಗಿ ಉಳಿಯದೆ, ಕಟ್ಟುನಿಟ್ಟಾಗಿ ಜಾರಿಗೆ ಬಂದರೆ ರಾಜ್ಯದ ಶೈಕ್ಷಣಿಕ ಕ್ಷೇತ್ರದಲ್ಲಿ ದೊಡ್ಡ ಬದಲಾವಣೆ ನಿರೀಕ್ಷಿಸಬಹುದು.

## ಸಿರವಾರವನ್ನು ಸಿಂಧನೂರು ಜಿಲ್ಲೆಗೆ ಸೇರಿಸಲು ವಿರೋಧ; ತಹಶೀಲ್ದಾರ್ ಮೂಲಕ ಡಿಸಿಗೆ ಮನವಿ

ಧೈರ್ಯದ ದಾರಿ



**ಸಿರವಾರ:**ಪ್ರಸ್ತಾವಿತ ಸಿಂಧನೂರು ಜಿಲ್ಲೆಗೆ ಸಿರವಾರ ತಾಲೂಕನ್ನು ಸೇರ್ಪಡೆಗೊಳಿಸುವ ಸರ್ಕಾರದ ನಿರ್ಧಾರವನ್ನು ಕೈಬಿಡಬೇಕೆಂದು ಆಗ್ರಹಿಸಿ, ಭಾರತೀಯ ಮಾನವ ಹಕ್ಕುಗಳ ಪರಿಷತ್ ವತಿಯಿಂದ ಇಂದು ಸ್ಥಳೀಯ ತಹಶೀಲ್ದಾರ್ ಅವರ ಮುಖಾಂತರ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು.
**ಪ್ರಮುಖ ಅಂಶಗಳು:**ಆಡಳಿತಾತ್ಮಕ ತೊಂದರೆ: ಸಿರವಾರವನ್ನು ಸಿಂಧನೂರು ಜಿಲ್ಲೆಗೆ ಸೇರಿಸುವುದರಿಂದ ಸಾರ್ವಜನಿಕರಿಗೆ ಆಡಳಿತಾತ್ಮಕ ಕೆಲಸಗಳಿಗಾಗಿ ದೂರದ ಪ್ರಯಾಣ ಬೆಳೆಸಬೇಕಾಗುತ್ತದೆ ಮತ್ತು ಇದರಿಂದ ಸಾಮಾನ್ಯ ಜನರಿಗೆ ತೊಂದರೆಯಾಗಲಿದೆ ಎಂದು ಪರಿಷತ್ ಆತಂಕ ವ್ಯಕ್ತಪಡಿಸಿದೆ.ಜನರ ಅಶೋತ್ತರ: ಯಾವುದೇ ನಿರ್ಧಾರ ತೆಗೆದುಕೊಳ್ಳುವ ಮೊದಲು ಸ್ಥಳೀಯರ ಮತ್ತು ನಾಗರಿಕ ಸಂಘಟನೆಗಳ ಅಭಿಪ್ರಾಯವನ್ನು ಪಡೆಯುವುದು ಅವಶ್ಯಕ. ಆದರೆ, ಈ ಪ್ರಕ್ರಿಯೆಯಲ್ಲಿ ಜನರ ಹಿತಾಸಕ್ತಿಯನ್ನು ನಿರ್ಲಕ್ಷಿಸಲಾಗಿದೆ ಎಂದು ಆರೋಪಿಸಲಾಗಿದೆ. 2ನೇಪುಟಕ್ಕೆ►

## ಗ್ರಾಮಗಳ ಉದ್ಧಾರವೇ ದೇಶದ ಉದ್ಧಾರ :ವೀರಭದ್ರಯ್ಯ ಹಿರೇಮಠ

ಧೈರ್ಯದ ದಾರಿ




**ಮಾನ್ವಿ:** ತಾಲೂಕಿನ ಕರಡಿಗುಡ್ಡ ಗ್ರಾಮದಲ್ಲಿ ಶ್ರೀ ವೆಂಕಟೇಶ್ವರ ಪದವಿ ಮಹಾವಿದ್ಯಾಲಯದ ವತಿಯಿಂದ ನಡೆದ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ಶಿಬಿರದ 3 ನೇ ದಿನದ ಕಾರ್ಯಕ್ರಮದಲ್ಲಿ ವೀರಭದ್ರಯ್ಯ ಹಿರೇಮಠ ಪ್ರಾಚಾರ್ಯರು ವಿಶೇಷ ಉಪನ್ಯಾಸ ನೀಡಿ ಗ್ರಾಮ ಸ್ವಚ್ಛತೆಯಲ್ಲಿ ಯುವಕರ ಪಾತ್ರದ ಕುರಿತು ಮಾತನಾಡಿ ಗ್ರಾಮೀಣ ಭಾಗದಲ್ಲಿ ಸ್ವಚ್ಛತೆಯ ಬಗ್ಗೆ ಅರಿವನ್ನು ಮೂಡಿಸಿಕೊಳ್ಳಬೇಕಾದರೆ ಪರಿಸರದ ಸ್ವಚ್ಛತೆ, ಆರೋಗ್ಯದ ಜಾಗೃತಿ ಹಾಗೂ ಮಾನಸಿಕ ಸ್ವಚ್ಛತೆಯ ಬಗ್ಗೆ ಗ್ರಾಮೀಣ ಭಾಗದ ಜನರಿಗೆ ಅರಿವು ಮೂಡಿಸುವುದರಿಂದಿಗೆ ಸಂಸ್ಕೃತಿ ಹಾಗೂ ಸಂಸ್ಕಾರದ ಗ್ರಾಮೀಣ ಭಾಗದ ಮೂಲ ನೆಲೆ ಅದನ್ನು ಕಾಪಾಡಿ ಕೊಳ್ಳುವುದರ ಜೊತೆಗೆ ಗ್ರಾಮದಲ್ಲಿ ಕಸ ವಿಲೇವಾರಿ ಮಾಡುವಾಗ ಒಣ ಕಸ 2ನೇಪುಟಕ್ಕೆ►

ಮೊದಲನೇ ಪುಟದಿಂದ

# ಬಜೆಟ್ ಹೈಲೈಟ್ಸ್ : ಕೃಷಿ ಕ್ಷೇತ್ರಕ್ಕೆ ಸಿಕ್ಕಿದ್ದೇನು..?

**ಖೋಟಾ ಬೀಜ, ಕೀಟನಾಶಕ ಜಾಲಕ್ಕೆ ಬ್ರೇಕ್:** ರೈತರಿಗೆ ಹಾಗೂ ದೋಷಪೂರಿತ ಬೀಜ, ಕೀಟನಾಶಕ ಪೂರೈಕೆ ಮಾಡುವುದು ಹಾಗೂ ಮಾರುಕಟ್ಟೆ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುವುದನ್ನು ತಡೆಗಟ್ಟಲು ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಿದೆ. ಈ ಬಗ್ಗೆ ಅಧ್ಯಯನ ನಡೆಸಿ ಶಿಫಾರಸು ಮಾಡಲು ಮಟ್ಟದ ಸಲಹಾ ಸಮಿತಿ ರಚನೆ.

**ಮಿಲೆಟ್ ಹಬ್ ಸ್ಥಾಪನೆ:**ಸಿರಿಧಾನ್ಯ ಮತ್ತು ಸಾವಯವ ಉತ್ಪನ್ನಗಳನ್ನು ಉತ್ತೇಜಿಸಲು ನಿರ್ಮಿಸಲಾಗುತ್ತಿರುವ ಮಿಲೆಟ್ ಹಬ್‌ಅನ್ನು ಸ್ವಾವಲಂಬಿ ಸಂಸ್ಥೆಯನ್ನಾಗಿ ಮಾಡಲಾಗುವುದು. ಇದು ರೈತರು ನವ ಉದ್ಯಮಿಗಳಿಗೆ ತಾಂತ್ರಿಕ ಸಹಾಯ, ಸಂಸ್ಕರಣಾ ಸೌಲಭ್ಯ ಮತ್ತು ಗುಣಮಟ್ಟದ ಪ್ರಮಾಣೀಕರಣ ಒದಗಿಸಲಿದೆ.

**ಪಾಂಡವಪುರ ಸಂಪೂರ್ಣ ಸಾವಯವ ತಾಲ್ಲೂಕು:**ಮಂಡ್ಯ ಜಿಲ್ಲೆಯ ಪಾಂಡವಪುರ ತಾಲೂಕನ್ನು ಸಂಪೂರ್ಣ ಸಾವಯವ ತಾಲ್ಲೂಕನ್ನಾಗಿ ಪರಿವರ್ತಿಸಲು ಅಧಿಕೃತ ಸಾವಯವ ಪ್ರಮಾಣೀಕರಣ ವ್ಯವಸ್ಥೆಯನ್ನು ಜಾರಿಗೆ ತರಲಾಗುವುದು.
ಅಥಣಿಯಲ್ಲಿ ಕೃಷಿ ಕಾಲೇಜು:
ತಜ್ಞರ ವರದಿಯ ಶಿಫಾರಸಿನಂತೆ ಬೆಳಗಾವಿ ಜಿಲ್ಲೆಯ ಅಥಣಿಯಲ್ಲಿ ಹೊಸ ಕೃಷಿ ಕಾಲೇಜು ಸ್ಥಾಪಿಸಲು ಅಗತ್ಯವಿರುವ ಪ್ರಥಮ ಹಂತದ ಒದಗಿಸಲಾಗುವುದು.

**ಇತರ ಪ್ರಮುಖ ಘೋಷಣೆಗಳು:**ಕೃಷಿ ಚಟುವಟಿಕೆಯಲ್ಲಿ ಶ್ರಮ ಮತ್ತು ಸಮಯ ಉಳಿಸಲು ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಯಡಿ ಅತ್ಯಾಧುನಿಕ ನಾಟಿ ಮತ್ತು ಕೊಯ್ಲು ಯಂತ್ರಗಳ ಸೇರ್ಪಡೆ.
ಚಿತ್ರದುರ್ಗ ಜಿಲ್ಲೆಯ ಬಬ್ಬೂರಿನ ಕೃಷಿ ಕೇಂದ್ರವನ್ನು ಟಿರಾಜ್ಯಮಟ್ಟದ ಕೃಷಿ ಉದ್ದಿಮೆ ತರಬೇತಿ ಕೇಂದ್ರಟಿವನ್ನಾಗಿ ಉನ್ನತೀಕರಣ.ಹವಾಮಾನ ಬದಲಾವಣೆ ತಡೆಗಟ್ಟಲು ಭತ್ತದ ಕೃಷಿಯಲ್ಲಿ ನೀರಿನ ದಕ್ಷತೆ ಹೆಚ್ಚಿಸುವ ಪರ್ಯಾಯ ತೇವ-ಒಣಗಿಸುವ (ವಿಧಾನಕ್ಕೆ ಉತ್ತೇಜನ.ನೂತನ ಧಾನ್ಯ (ಬೇಳೆಕಾಳು) ತಳಿಗಳ ಬಿತ್ತನೆ ಬೀಜ ಬಳಕೆಗೆ ರೈತರಿಗೆ ನೀಡುತ್ತಿರುವ ಸಹಾಯಧನ ಹೆಚ್ಚಳ.ಕೃಷಿ ಇಲಾಖೆಯ ಎಲ್ಲಾ ಪ್ರಯೋಗಾಲಯಗಳಿಗೆ ಎನ್‌ಎಬಿಎಲ್ ಮಾನ್ಯತೆ ಪಡೆದು ನಿಖರ ಪರೀಕ್ಷಾ ವರದಿ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ಸಿದ್ದರಾಮಯ್ಯ 2026-27ನೇ ಸಾಲಿನ ಬಜೆಟ್‌ನಲ್ಲಿ ಘೋಷಿಸಿದ್ದಾರೆ.

# ಬಜೆಟ್‌ನಲ್ಲಿ ಹೊಸ ಅಬಕಾರಿ ನೀತಿ ಘೋಷಣೆ

ಸಾಲಿಗೆ 45 ಸಾವಿರ ಕೋಟಿ ರೂ.ಗಳ ಸಂಗ್ರಹಣ ಗುರಿಯನ್ನು ಅಬಕಾರಿ ಇಲಾಖೆಗೆ ನೀಡಲಾಗಿದೆ ಎಂದು ಮುಖ್ಯಮಂತ್ರಿಗಳು ಬಜೆಟ್‌ನಲ್ಲಿ ಹೇಳಿದ್ದಾರೆ.

ನೋಂದಣಿ ಮುದ್ರಾಂಕ ಇಲಾಖೆಯಲ್ಲೂ ಕಳೆದ ಸಾಲಿಗಿಂತ ಶೇ. 12.3 ರಷ್ಟು ಬೆಳವಣಿಗೆಯಾಗಿದ್ದು, 2026-27ನೇ ಸಾಲಿಗೆ ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ 29 ಸಾವಿರ ಕೋಟಿ ರೂ.ಗಳ ರಾಜಸ್ವ ಗುರಿ ನಿಗದಿಪಡಿಸಲಾಗಿದೆ.

ಮೋಟಾರು ವಾಹನ ತೆರಿಗೆಯಲ್ಲೂ ಶೇ. 8.5 ರಷ್ಟು ಬೆಳವಣಿಗೆಯಾಗಿದ್ದು, 2026-27ನೇ ಸಾಲಿನಲ್ಲಿ ಸಾರಿಗೆ ಇಲಾಖೆಗೆ 15,500 ಕೋಟಿ ರೂ.ಗಳ ತೆರಿಗೆ ಸಂಗ್ರಹ ಗುರಿಯನ್ನು ನಿಗದಿಪಡಿಸಲಾಗಿದೆ.

ಗಣಿಗಾರಿಕೆಯಿಂದ 2026-27ನೇ ಸಾಲಿನಲ್ಲಿ 11 ಸಾವಿರ ಕೋಟಿ ರೂ.ಗಳ ಆದಾಯ ನಿರೀಕ್ಷಿಸಲಾಗಿದೆ.

# ಸಿರವಾರವನ್ನು ಸಿಂಧನೂರು ಜಿಲ್ಲೆಗೆ ಸೇರಿಸಲು ವಿರೋಧ; ತಹಶೀಲ್ದಾರ್ ಮೂಲಕ ಡಿಸಿಗೆ ಮನವಿ

**ಸಂಘಟನೆಯ ಎಚ್ಚರಿಕೆ:** ಒಂದು ವೇಳೆ ಸಿರವಾರವನ್ನು ಸಿಂಧನೂರು ಜಿಲ್ಲೆಗೆ ಸೇರಿಸುವ ನಿರ್ಧಾರವನ್ನು ಹಿಂಪಡೆಯದಿದ್ದರೆ, ಮುಂಬರುವ ದಿನಗಳಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಸಂಘಟನೆಯ ಪದಾಧಿಕಾರಿಗಳು ಎಚ್ಚರಿಸಿದ್ದಾರೆ. "ಸಿರವಾರ ತಾಲೂಕಿನ ಭೌಗೋಳಿಕ ಮತ್ತು ಸಾಮಾಜಿಕ ಸ್ಥಿತಿಗತಿಗಳನ್ನು ಪರಿಗಣಿಸಿ, ಸಾರ್ವಜನಿಕರಿಗೆ ಅನುಕೂಲವಾಗುವ ರೀತಿಯಲ್ಲಿ ನಿರ್ಧಾರ ಕೈಗೊಳ್ಳಬೇಕು. ಪ್ರಸ್ತಾವಿತ ಜಿಲ್ಲೆ ಸೇರ್ಪಡೆಯಿಂದ ಜನಸಾಮಾನ್ಯರಿಗೆ ಲಾಭಕ್ಕಿಂತ ನಷ್ಟವೇ ಹೆಚ್ಚು," ಎಂದು ಭಾರತೀಯ ಮಾನವ ಹಕ್ಕುಗಳ ಪರಿಷತ್‌ನ ಜಿಲ್ಲಾಧ್ಯಕ್ಷರಾದ ಹಿದಾಯತ್ ಬಡೆಘರ್ ಈ ಸಂದರ್ಭದಲ್ಲಿ ತಿಳಿಸಿದರು.
ಈ ಸಂದರ್ಭದಲ್ಲಿ ರಾಜ್ಯ ಕಾರ್ಯದರ್ಶಿಯಾದ ಎಂ ಡಿ ಹುಸೇನ್. ಜಿಲ್ಲಾ ಸಂಚಾಲಕರಾದ ಶ್ರೀನಿವಾಸ್ ರೆಡ್ಡಿ. ಜಿಲ್ಲಾ ಕಾರ್ಯದರ್ಶಿಯಾದ ಖಾಜಾ. ತಾಲೂಕು ಅಧ್ಯಕ್ಷರಾದ ನದಿ ರಸೂಲ್. ಆಟೋ ಖಾಜಾ.

# ಗ್ರಾಮಗಳ ಉದ್ಧಾರವೇ ದೇಶದ ಉದ್ಧಾರ :ವೀರಭದ್ರಯ್ಯ ಹಿರೇಮಠ

ಮತ್ತು ಹಸಿ ಕಸ ಹೇಗೆ ವಿಂಗಡಿಸಬೇಕು ಎಂದು ಗ್ರಾಮೀಣ ಜನರಿಗೆ ಶಿಬಿರಾರ್ಥಿಗಳು ಜಾಗೃತಿಯನ್ನು ಮೂಡಿಸಬೇಕೆಂದು ತಿಳಿಸಿದರು.ಸಂಸ್ಕಾರ ಮತ್ತು ಸಂಸ್ಕೃತಿಯು ಯಾರಲ್ಲಿ ಇರುತ್ತೆ ಅವರು ಉತ್ತಮವಾದ ಬದಕನ್ನು ಕಟ್ಟಿಕೊಳ್ಳುತ್ತಾರೆ ಎಂದು ಹೇಳಿದರು.
ಉದ್ಘಾಟಕರಾಗಿ ಆಗಮಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿ ನಾರಾಯಣ ಮುಖ್ಯ ಗುರುಗಳು ಮಾತನಾಡಿ ರಾಷ್ಟೀಯ ಸೇವಾ ಯೋಜನೆ ಮಾಡುವ ಉದ್ದೇಶವೇನೆಂದರೆ ಸ್ವಯಂ ಪ್ರೇರಿತರಾಗಿ ಕೆಲಸವನ್ನು ಮಾಡಬೇಕು, ರಾಷ್ಟ ಪ್ರೇಮ ಹಾಗೂ ದೇಶಭಿಮಾನವನ್ನು ಪ್ರತಿಯೊಬ್ಬರಲ್ಲಿ ಮೂಡಿಸಿಕೊಳ್ಳಬೇಕೆಂದು ಎಂದು ಹೇಳಿದರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಡಾ. ಹುಲಿಯಪ್ಪ ದುಮತಿ ಮಾತನಾಡಿ ಮನುಷ್ಯನ ಮನುಸ್ಸು ಸ್ವಚ್ಛವಾಗಿದ್ದರೆ ದೇಶ ಸ್ವಚ್ಛತೆಯಿಂದ ಇರುತ್ತದೆ.ಗ್ರಾಮೀಣ ಭಾಗದಲ್ಲಿ ಸ್ವಚ್ಛತೆಯ ಬಗ್ಗೆ ಯುವಕರಲ್ಲಿ ಜಾಗೃತಿಯನ್ನು ಮೂಡಿಸಬೇಕು ಎಂದು ಹೇಳಿದರು.ಈ ಕಾರ್ಯಕ್ರಮದಲ್ಲಿ
ಕಾಲೇಜಿನ ಪ್ರಾಚಾರ್ಯರಾದ ಶಂಕ್ರಪ್ಪ ಅಂಗಡಿ,
ರಾಘವೇಂದ್ರ ನಾಯಕ ಪ್ರಾಧ್ಯಾಪಕರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.ಕಾಲೇಜಿನ ಉಪನ್ಯಾಸಕರಾದ ಅಂಬಣ್ಣ ನಾಯಕ,ಆಫ್ರಿನ್ ಬೇಗಂ , ಶೈಲಜಾ ,ಶರಣಬಸವ ಕರಡಿಗುಡ್ಡ, ಉಪನ್ಯಾಸಕರಾದ ದೇವೇಂದ್ರಪ್ಪ ಕರಡಿಗುಡ್ಡ ಊರಿನ ಮುಖಂಡರಾದ ನರಸಿಂಹ ನಾಯಕ, ಎಂ ವೆಂಕಟೇಶ ನಾಯಕ , ಆರ್ ಹುಸೇನಪ್ಪ ನಾಯಕ ಭಾಗಯ್ಯ ನಾಯಕ ಸೇರಿದಂತೆ ಕಾಲೇಜಿನ ಉಪನ್ಯಾಸಕರು ಮತ್ತು ಶಿಬಿರಾರ್ಥಿಗಳು ಗ್ರಾಮಸ್ಥರು ಭಾಗವಹಿಸಿದ್ದರು.ಅನಿತಾ ನಿರೂಪಿಸಿದರು, ಪವಿತ್ರಾ ಸ್ವಾಗತಿಸಿದರು, ಸಣ್ಣ ಚನ್ನಬಸ್ಸಮ್ಮ ವಂದಿಸಿದರು.

# ಉದ್ಯೋಗಾಕಾಂಕ್ಷಿಗಳಿಗೆ ಬಜೆಟ್‌ನಲ್ಲಿ ಗುಡ್ ನ್ಯೂಸ್ ಕೊಟ್ಟ ಸಿಎಂ ಸಿದ್ದರಾಮಯ್ಯ

ಧಾರವಾಡದ ಯುವಕರ ಈ ಆಕ್ರೋಶ ಮತ್ತು ಕೂಗು ಕೊನೆಗೂ ವಿಧಾನಸೌಧದ ಮೆಟ್ಟಿಲೇರಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಯುವಕರ ಧ್ವನಿಗೆ ಓಗೊಟ್ಟು ಈ ಬೃಹತ್ ನೇಮಕಾತಿಗೆ ಹಸಿರು ನಿಶಾನೆ ತೋರಿದ್ದಾರೆ.
ಬೆಂಗಳೂರು, ಧಾರವಾಡ, ಮೈಸೂರು ಸೇರಿದಂತೆ ರಾಜ್ಯದ ಮೂಲೆ ಮೂಲೆಗಳಲ್ಲಿ ಪಿಜಿ ಮಾಡಿಕೊಂಡು, ಕೋಚಿಂಗ್ ಸಾವಿರಾರು ರೂ. ಸುರಿದು ಹಗಲಿರುಳು ಓದುತ್ತಿರುವ ಲಕ್ಷಾಂತರ ಯುವಕರಿಗೆ ಈ ಘೋಷಣೆ ದೊಡ್ಡ ಬೂಸ್ಟ್ ಕೊಟ್ಟಿದೆ.

ಸದ್ಯ ಸಿಎಂ ಬಜೆಟ್‌ನಲ್ಲಿ ಒಟ್ಟಾರೆ 56 ಸಾವಿರ ಹುದ್ದೆಗಳ ಭರ್ತಿ ಎದು ಹೇಳಿದ್ದರೂ, ಯಾವ ಎಷ್ಟು ಎಂಬುದು ಅಧಿಕೃತವಾಗಿ ಹೊರಬೀಳಬೇಕಿದೆ. ಆದರೆ ವಿಧಾನಸೌಧದ ಮೂಲಗಳ ಪ್ರಕಾರ, ಅತಿ ಹೆಚ್ಚು ಖಾಲಿ ಇರುವ ಪೊಲೀಸ್ ಇಲಾಖೆ, ಶಿಕ್ಷಣ ಇಲಾಖೆ (ಶಿಕ್ಷಕರ ನೇಮಕಾತಿ), ಆರೋಗ್ಯ, ಕಂದಾಯ ಮತ್ತು ಇಲಾಖೆಗಳಲ್ಲಿ ದೊಡ್ಡ ಮಟ್ಟದ ನೇಮಕಾತಿ ನಡೆಯುವ ಪಕ್ಕಾ ಲೆಕ್ಕಾಚಾರವಿದೆ.ಮುಖ್ಯಮಂತ್ರಿಗಳ ಹೇಳಿಕೆಯಿಂದ ಎಲ್ಲರ ಕಣ್ಣುಗಳು ಈಗ ನೇಮಕಾತಿ ಪ್ರಾಧಿಕಾರಗಳಾದ ಕೆಪಿಎಸ್‌ಸಿ ಮತ್ತು ಕೆಇಎ ಕಡೆ ತಿರುಗಿವೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಒಳ ಮೀಸಲಾತಿ ಐಕ್ಯ ಹೋರಾಟ ಸಮಿತಿಯಿಂದ ಮುಖ್ಯಮಂತ್ರಿಗಳಿಗೆ ಮನವಿ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಬಸವ ವೃತ್ತದಲ್ಲಿ ಒಳ ಮೀಸಲಾತಿ ಐಕ್ಯ ಹೋರಾಟ ಸಮಿತಿ ಮಾನ್ವಿ ವತಿಯಿಂದ ಮುಖ್ಯಮಂತ್ರಿಗಳಿಗೆ ಗ್ರೇಡ್-2 ತಹಶೀಲ್ದಾರ್ ಅಬ್ದುಲ್ ವಾಹಿದ್ ರವರ ಮೂಲಕ ಮನವಿ ಸಲ್ಲಿಸಿ ಹಿರಿಯ ದಲಿತಪರ ಮುಖಂಡರಾದ ಎ.ಬಾಲಸ್ವಾಮಿ ಕೋಡ್ಲಿ ಮನವಿ ಸಲ್ಲಿಸಿ ಮಾತನಾಡಿ ರಾಜ್ಯದಲ್ಲಿ ಶೇ18 ರಷ್ಟಿರುವ ದಲಿತರ ಹಕ್ಕುಗಳ ಸಂರಕ್ಷಣೆಗಾಗಿ ಸರ್ಕಾರವೇ ನೇಮಕಮಾಡಿರುವ ನಿವೃತ್ತ ನ್ಯಾಯಮೂರ್ತಿ ಎಚ್.ಎನ್.ನಾಗಮೋಹನ್ ದಾಸ್ ರವರು ರಾಜ್ಯದಲ್ಲಿನ ಪರಿಶೀಷ್ಟ ಜಾತಿಗಳ ಮೀಸಲಾತಿಯನ್ನು ಶೇ17ಕ್ಕೆ ಹೆಚ್ಚಿಸಲು ಶೀಫಾರಸ್ಸು ಮಾಡಿರುತ್ತಾರೆ ರಾಜ್ಯ ಸರ್ಕಾರ ಮಂಡಿಸಿದ ಒಳಮಿಸಲಾತಿ ವಿದೇಯಕಕ್ಕೆ ರಾಜ್ಯಪಾಲರ ಸಹಿ ಪಡೆದು ಅನುಮೋದನೆ ಗೊಂಡಿದ್ದರು ಕೂಡ ರಾಜ್ಯ ಸರ್ಕಾರವು ಒಳಮೀಸಲಾತಿಯನ್ನು ಹೊರತು ಪಡಿಸಿ ರಾಜ್ಯದಲ್ಲಿ 56,432 ಹುದ್ದೆಗಳನ್ನು ಭರ್ತಿಮಾಡುವ ಕುರಿತು 16ನೇ ಸಚಿವ ಸಂಪುಟದಲ್ಲಿ ತಿರ್ಮಾನ ಮಾಡಿರುವುದರಿಂದ ಮಾದಿಗ ಸಮುದಾಯಕ್ಕೆ ತೀವ್ರವಾದ ಅನ್ಯಾಯವಾಗಲಿದೆ ಅದ್ದರಿಂದ ರಾಜ್ಯ .ಸರ್ಕಾರ ನೇಮಕಾತಿಗಾಗಿ ಹೋರಾಡಿಸಿರುವ ಅದೇಶವನ್ನು ಕೂಡಲೇ ಹಿಂಪಡೆಯಬೇಕು ಹಾಗೂ ನೇಮಕಾತಿಯಲ್ಲಿ ಒಳಮೀಸಲಾತಿಯನ್ನು ಕಡ್ಡಾಯಗೊಳಿಸಬೇಕು. ಕೂಡಲೆ ಒಳಮೀಸಲಾತಿ ಕುರಿತು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸುಮಾಡಿ ಮನವರಿಕೆ ಮಾಡಿ ಸಂವಿಧಾನದ 9ನೇ ಅನುಸೂಚಿಯಲ್ಲಿ ಸೇರಿಸುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು. ನೇರ ನೇಮಕಾತಿ,ಬಡ್ತಿ ನೇಮಕಾತಿ ಮತ್ತು ಮುಂಬಡ್ತಿ ಬ್ಯಾಕ್ ಲ್ಯಾಗ್ ನೇಮಕಾತಿಗಳಲ್ಲಿ ಒಳಮೀಸಲಾತಿಯನ್ನು ಜಾರಿ ಮಾಡಬೇಕು , ಎಸ್.ಇ.ಪಿ-ಟಿ.ಎಸ್ ಪಿ. ಅನುದಾನ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ



ಒಳಮೀಸಲಾತಿಯನ್ನು ಜಾರಿಗೆ ತರಬೇಕು. ವಿಶ್ವವಿದ್ಯಾಲಯಗಳಲ್ಲಿ ನಡೆಯುವ ನೇಮಕಾತಿಗಳಲ್ಲಿ ಘಟಕ ಎಂದು ಪರಿಗಣಿಸಬೇಕೆನ್ನುವ ಪ್ರಸ್ತಾವನೆಯನ್ನು ಕೈಬಿಡಬೇಕು ಸಮಾಜ ಕಲ್ಯಾಣ ಇಲಾಖೆಯನ್ನು ಸಮರ್ಪಕವಾಗಿ ನಿರ್ವಹಿಸದೆ ಇರುವ ಸಚಿವರನ್ನು ಬದಲಾಯಿಸಬೇಕು.ಆದಿಜಾಂಬವ ಅಭಿವೃದ್ಧಿ ನಿಗಮಕ್ಕೆ ಅಂದಾಜು ಒಂದು ಸಾವಿರ ಕೋಟಿ ಅನುದಾನವನ್ನು ಮೀಸಲಿಡಬೇಕು. ಎಂದು ಒತ್ತಾಯಿಸಿದರು.
ಬಸವ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಟೈರ್‌ಗೆ ಬೆಂಕಿ ಹಚ್ಚಿ ಪ್ರತಿಭಟನೆಯನ್ನು ನಡೆಸಲಾಯಿತು.
ಶಿವರಾಜನಾಯಕ, ಪ್ರಭುರಾಜ್ ಕೋಡ್ಲಿ, ಹುಸೇನಪ್ಪ ಜಗ್ಲಿ, ಚಂದ್ರಶೇಖರ ಕುರ್ಡಿ, ಪಿ.ಜಯಪ್ರಕಾಶ,ಮೂಕಪ್ಪ ಕಟ್ಟಿಮನಿ,ಆಶೋಕ ತಡಕಲ್, ಅಬ್ರಾಹಂ ಹೊನ್ನಟಗಿ , ಮಲ್ಲೇಶ ಜಗ್ಲಿ, ಪಿ.ಆನಿಲ್ ಕುಮಾರ, ಸುಂದರ ಕಪಗಲ್, ಶಾಂತಪ್ಪ ಕಪಗಲ್, ಪಿ.ಪರಮೇಶ, ತಾಯಪ್ಪ ಬಿ ಹೊಸೂರ್, ಜೆ.ಹೆಚ್. ದೇವರಾಜ್ ,ಯಲ್ಲಪ್ಪೊ ಹಿರೇಬಾದರದಿನ್ನಿ, ಬಸವರಾಜ ನಕ್ಕುಂದಿ, ಪಿ.ರವಿಕುಮಾರ, ರಮೇಶ, ಹನುಮಂತಕೋಟೆ, ನವೀನ್ ಕುರ್ಡಿ, ರವಿ ನೀರಮಾನ್ವಿ, ಪರಸೂರಾಮ ಬಾಗಲವಾಡ, ಶರಣು ಮುದ್ದಂಗುಡಿ, ಪ್ರಶಾಂತ ಜಾಗೀರಪನ್ನೂರು, ಸೇರಿದಂತೆ ತಾಲೂಕಿನ ಸುತ್ತಮುತ್ತಲಿನ ಗ್ರಾಮಗಳ ಸಾವಿರಾರು ಸಮುದಾಯದವರು ಭಾಗವಹಿಸಿದರು.

# ಲಿಂಗಸಗೂರು: ಕನ್ನಡ ಸೇನೆ ಕರ್ನಾಟಕ ಸಂಘಟನೆಯ ನೂತನ ಪದಾಧಿಕಾರಿಗಳ ಆಯ್ಕೆ



ಧೈರ್ಯದ ದಾರಿ

**ಲಿಂಗಸಗೂರು:** ಕನ್ನಡ ನಾಡು, ನುಡಿ ಮತ್ತು ಸಂಸ್ಕೃತಿಯ ಸಂರಕ್ಷಣೆಗಾಗಿ ಹೋರಾಡುತ್ತಿರುವ ಕನ್ನಡ ಸೇನೆ ಕರ್ನಾಟಕ ಸಂಘಟನೆಯ ಲಿಂಗಸಗೂರು ತಾಲೂಕು ಮತ್ತು ನಗರ ಘಟಕಕ್ಕೆ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ಸಂಘಟನೆಯ ರಾಜ್ಯಾಧ್ಯಕ್ಷರಾದ ಜೆ ಕುಮಾರ್ ಉತ್ತರ ಕರ್ನಾಟಕದ ಅಧ್ಯಕ್ಷರಾದ ಚನ್ನಬಸವ ಜೇಕ್ಕಿನ್ ರವರ ಆದೇಶದ ಮೇರೆಗೆ ಜಿಲ್ಲಾಧ್ಯಕ್ಷರಾದ ಬಸವರಾಜ್ ಎಂ. ಅವರು ಸಂಘಟನೆಯ ಬಲವರ್ಧನೆಗಾಗಿ ಈ ಕೆಳಗಿನಂತೆ ಸಮರ್ಥ ಪದಾಧಿಕಾರಿಗಳನ್ನು ಆಯ್ಕೆ ಮಾಡಿ ಆದೇಶ ಹೊರಡಿಸಿದ್ದಾರೆ.

ನೇಮಕಗೊಂಡ ಪದಾಧಿಕಾರಿಗಳು.ಪದಾಧಿಕಾರಿಯ ಹೆಸರು ವಹಿಸಲಾದ ಜವಾಬ್ದಾರಿ

ಯವನೂರಪ್ಪ ಅಧ್ಯಕ್ಷರು, ಲಿಂಗಸಗೂರು ನಗರ ಘಟಕ

ಮರಿದೇವಪ್ಪ ಪ್ರಧಾನ ಕಾರ್ಯದರ್ಶಿ, ಲಿಂಗಸಗೂರು ತಾಲೂಕು

ರಾಯಪ್ಪ ಉಪಾಧ್ಯಕ್ಷರು, ಲಿಂಗಸಗೂರು ನಗರ ಘಟಕ

**ಸಂಘಟನಾ ಬಲವರ್ಧನೆಗೆ ಕರೆ:** ನೇಮಕಾತಿ ಬಳಿಕ ಮಾತನಾಡಿದ ಜಿಲ್ಲಾಧ್ಯಕ್ಷ ಬಸವರಾಜ್ ಎಂ. ಅವರು, "ಲಿಂಗಸಗೂರು ಭಾಗದಲ್ಲಿ ಕನ್ನಡದ ಹೋರಾಟಗಳನ್ನು ಚುರುಕುಗೊಳಿಸಲು ಮತ್ತು ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸಲು ಹೊಸ ತಂಡವನ್ನು ರಚಿಸಲಾಗಿದೆ. ನೂತನ ಪದಾಧಿಕಾರಿಗಳು ಸಂಘಟನೆಯ ಆಶಯದಂತೆ ಪ್ರಾಮಾಣಿಕವಾಗಿ ಕೆಲಸ ಮಾಡಲಿದ್ದಾರೆ," ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ನೂತನವಾಗಿ ಆಯ್ಕೆಯಾದ ಯವನೂರಪ್ಪ, ಮರಿದೇವಪ್ಪ ಮತ್ತು ರಾಯಪ್ಪ ಅವರಿಗೆ ತಾಲೂಕಿನ ಕನ್ನಡಾಭಿಮಾನಿಗಳು, ವಿವಿಧ ಸಂಘಟನೆಗಳ ಮುಖಂಡರು ಹಾಗೂ ಕಾರ್ಯಕರ್ತರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ಅವೈಜ್ಞಾನಿಕ ಚೆಕ್‌ಡ್ಯಾಂ ನಿರ್ಮಾಣ ತಡೆಯಿರಿ: ಆಶೋಕ ನಿಲ್ಲಾಗಲ್

ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಪತ್ರಿಕಾ ಭವನದಲ್ಲಿ ಕರ್ನಾಟಕ ರೈತ ಸಂಘದ ಜಿಲ್ಲಾಧ್ಯಕ್ಷರಾದ ಆಶೋಕ ನಿಲ್ಲಾಗಲ್ ಮಾತನಾಡಿ ಸಿರವಾರ ತಾಲೂಕಿನ ಲಕ್ಕಂದಿನ್ನಿ ಗ್ರಾಮದ ಸರ್ವೆನಂ 12/*/ ರಲ್ಲಿ 17 ಎಕರೆ ಸರ್ಕಾರಿ ಹೆಚ್ಚುವರಿ ಜಮೀನಿನಲ್ಲಿ ಭೂರಹಿತ ಅನೇಕ ಸಣ್ಣ ರೈತರು ಸಾಗುವಳಿ ಮಾಡುತ್ತಿದ್ದು ಈ ಪ್ರದೇಶದ ಜಮೀನಿನಲ್ಲಿ ಸಣ್ಣ ನೀರಾವರಿ ವೀಭಾಗಿಯ ಇಲಾಖೆಯಿಂದ ಪ,ಜಾತಿ, ಪ.ಪಂಗಡ ರೈತರು ಹೆಚ್ಚಿರಿವ ಜಮೀನಿನಲ್ಲಿ ರೈತರ ಅನುಕೂಲಕ್ಕಾಗಿ ನಿರ್ಮಾಣ ಮಾಡಲಾಗುತ್ತಿರುವ ಚೆಕ್‌ಡ್ಯಾಂ ನಿರ್ಮಾಣವನ್ನು ಗುತ್ತಿಗೆದಾರರು ಅವೈಜ್ಞಾನಿಕವಾಗಿ ತಡೆಗೋಡೆ ಇಲ್ಲದೆ ಚೆಕ್ ಡ್ಯಾಂ ನಿರ್ಮಾಣ ಮಾಡುತ್ತಿರುವುದರಿಂದ ಈ ಪ್ರದೇಶದ ಸುತ್ತಮುತ್ತಲಿನ ರೈತರ ಜಮೀನುಗಳಿಗೆ ಹಳ್ಳದ ನೀರು ನುಗುವ ಸಂಭವವಿರುತ್ತದೆ ಇದ್ದರಿಂದ ರೈತರ ಬೆಳೆ




ಹಾನಿಯಾಗಲಿದೆ ಚೆಕ್ ಡ್ಯಾಂ ನಿರ್ಮಾಣದ ಜೋತೆಗೆ ತಡೆಗೋಡೆ ನಿರ್ಮಾಣ ಮಾಡದೆ ಇದ್ದಲ್ಲಿ ರೈತರಿಂದ ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದರು.

ಕರ್ನಾಟಕ ರೈತ ಸಂಘದ ಸಿರವಾರ ತಾ.ಅಧ್ಯಕ್ಷರಾದ ವೀರೇಶನಾಯಕ, ಶಿವರಾಜದೊಡ್ಡಿ, ಹುಲಿಗೆಪ್ಪ, ನಾಗರಾಜ ಬೊಮ್ಮನಾಳ್, ಹನುಮಂತ ಕುಂಬಾರ,ಕಳಕರಾಯಪ್ಪ, ಗುರುರಾಜ ಸುಂಕೇಶ್ವರ, ಮಲ್ಲಯ್ಯ ಲಕ್ಕಂದಿನ್ನಿ, ವೆಂಕಟೇಶ ಲಕ್ಕಂದಿನ್ನಿ ಸೇರಿದಂತೆ ಇನ್ನಿತರರು ಇದ್ದರು.

# ಪಿಯು ಪರೀಕ್ಷೆ: ಭೌತಶಾಸ್ತ್ರ ವಿಷಯಕ್ಕೆ 105 ವಿದ್ಯಾರ್ಥಿಗಳು ಗೈರು

**ರಾಯಚೂರು ಮಾ,6–** ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯಿಂದ 2026ರ ಮಾರ್ಚ್ 06ರ ಶುಕ್ರವಾರ ದಂದು ನಡೆದ ಭೌತಶಾಸ್ತ್ರ ವಿಷಯದಲ್ಲಿ 105 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಾರೆ.

ಜಿಲ್ಲೆಯ 43 ಪರೀಕ್ಷೆ ಕೇಂದ್ರಗಳಲ್ಲಿ ನಡೆದ ಭೌತಶಾಸ್ತ್ರ ವಿಷಯದಲ್ಲಿ ಪರೀಕ್ಷೆಗೆ 5,730 ನೋಂದಣಿಯಾಗಿದ್ದು, 5,625 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 105 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಾರೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಕ್ಷೇಪಣೆಗೆ ಅರ್ಜಿ ಆಹ್ವಾನ

**ರಾಯಚೂರು ಮಾ,6–** ರಾಯಚೂರು ನಗರದ ಸೀಮಾಂತರದಲ್ಲಿ ಬರುವ ವಾರ್ಡ್ ನಂ. 05ರ ವೆಂಕಟೇಶ್ವರ ಕೌಂಟಿ, ನಿವೇಶನ ಮುನ್ಸಿಪಾಲ್ ನಂ. 1–11–66/05/47,48,49&50 ರಲ್ಲಿ ಶ್ರೀ ಮೊಹಮ್ಮದ್ ಶಬ್ಬೀರ್ ತಂದೆ ಹಮೀದ್ ಪಾಟೀಲ್ ಇವರು ಧಾರ್ಮಿಕ ಉದ್ದೇಶಕ್ಕಾಗಿ ಪ್ರೇಯರ್ ಹಾಲ್ ಕಟ್ಟಡವನ್ನು ನಿರ್ಮಾಣ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ.

ಈ ಸ್ಥಳದಲ್ಲಿ ನಕ್ಷೆ ಪ್ರಕಾರ ಕಟ್ಟಡ ಪರವಾನಿಗೆ ಕೋರಿ ಅರ್ಜಿ ಸಲ್ಲಿಸಿರುವುದರಿಂದ ಇದಕ್ಕೆ ಅಕ್ಕ–ಪಕ್ಕದ ಹಾಗೂ ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆ ಇದ್ದಲ್ಲಿ ಈ ನೋಟೀಸ್ ಪ್ರಕಟಿಸಿದ (15) ದಿನಗಳ ಒಳಗಾಗಿ ದಾಖಲೆಳೊಂದಿಗೆ ಈ ಕಾರ್ಯಾಲಯಕ್ಕೆ ದೂರು ಸಲ್ಲಿಸತಕ್ಕದ್ದು, ಅವಧಿ ಮುಗಿದ ಮೇಲೆ ಆಕ್ಷೇಪಣೆ ತಕರಾರು ಸಲ್ಲಿಸಿದ್ದಲ್ಲಿ ಅದನ್ನು ಪರಿಗಣಿಸಲಾಗುವುದಿಲ್ಲವೆಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾಜ ಕಲ್ಯಾಣ ಇಲಾಖೆಯಿಂದ ಪ್ರತಿಷ್ಠಿತ 6ನೇ ತರಗತಿಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಯಚೂರು ಮಾ,6–** ಸಮಾಜ ಕಲ್ಯಾಣ ಇಲಾಖೆಯಿಂದ 2026–27ನೇ ಸಾಲಿಗೆ ಪ್ರತಿಭಾವಂತ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳನ್ನು ಪ್ರತಿಷ್ಠಿತ 6ನೇ ತರಗತಿಗೆ ಶಾಲೆಗಳಿಗೆ ಪ್ರವೇಶಕ್ಕೆ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು, ಇಲಾಖೆಯ ವೈಬ್‌ಸೈಟ್ ವಿಳಾಸ: ತಿತಿತಿ.ತಿ.ಇಚಿಡಿ.ಟುಛಿ.ಟಿ ನಲ್ಲಿ ದಿನಾಂಕ: 15–04–2026 ರಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ದಿನಾಂಕ:04–05–2026 ರಂದು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿರುತ್ತದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯದಲ್ಲಿ ಬೌದ್ಧ ಅಭಿವೃದ್ಧಿ ನಿಗಮ ಸ್ಥಾಪನೆಯಾಗಲಿ: ಮಹೇಶ ಗೋರನಾಳಕರ್




**ಬೀದರ: ಮಾ.6:**ರಾಜ್ಯದಲ್ಲಿ ಬೌದ್ಧ ಅಭಿವೃದ್ಧಿ ನಿಗಮ ಸ್ಥಾಪಿಸಿ ಅನುದಾನ ಮೀಸಲಿಡಬೇಕೆಂದು ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ (ಅಂಬೇಡ್ಕರ್) ಪಕ್ಷದ ರಾಜ್ಯ ಸಂಯೋಜಕ ಮಹೇಶ ಗೋರನಾಳಕರ ಸರ್ಕಾರಕ್ಕೆ ಒತ್ತಾಯ ಮಾಡಿದರು.

ಈ ಕುರಿತು ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ (ಅಂಬೇಡ್ಕರ್) ವತಿಯಿಂದ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಸರ್ಕಾರ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕೆಂದು ಒತ್ತಾಯಿಸಿದರು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಸಮುದಾಯದ ಸವಾರ್ಂಗೀಣ ಅಭಿವೃದ್ಧಿಗೆ 24% ಪ್ರತಿಶತ ಅನುದಾನ ಮೀಸಲಿಡಬೇಕು. ದಲಿತರಿಗಾಗಿ ಮೀಸಲಿಟ್ಟ ಅನುದಾನ ಅನ್ಯ ಕಾರ್ಯಕ್ಕೆ ಬಳಸಿದರೆ ಅಂಥಹ ಜನಪ್ರತಿನಿಧಿಗಳ ವಿರುದ್ಧ ಅಟ್ರಾಸಿಟಿ ಕೇಸ್ ದಾಖಲಿಸಲಾಗುವುದು. ಕರ್ನಾಟಕದಲ್ಲಿ ಬೌದ್ಧ ಅಭಿವೃದ್ಧಿ ನಿಗಮ ಸ್ಥಾಪನೆ ಮಾಡಬೇಕು, ಕರ್ನಾಟಕದ ಪ್ರತಿ ಹಳ್ಳಿಯಲ್ಲಿ ದಲಿತರಿಗೆ ಸ್ಮಶಾನ ಭೂಮಿ ಮಂಜುರು ಮಾಡಬೇಕು, ಪ್ರತಿ ಜಿಲ್ಲೆ ತಾಲೂಕು ಮತ್ತು ಹೊಬ್ಬಳಿ ಮಟ್ಟದಲ್ಲಿ ಸುಸಜ್ಜಿತವಾದ ಡಾ.ಬಿ.ಆರ್.ಅಂಬೇಡ್ಕರ್ ಭವನಗಳು ನಿರ್ಮಾಣ ಮಾಡಬೇಕು, ಫಾರಂ ನಂಬರ 50.53. ಮತ್ತು 57 ಅರ್ಜಿ ಸಲ್ಲಿಸಿ ಬಗರ್ ಹುಕುಂ ಸಾಗುವಳಿ ಮಾಡುತ್ತಿರುವ ರೈತರಿಗೆ ಅರಣ್ಯ ಇಲಾಖೆ ಅನ್ಯಾಯ ಮಾಡುತ್ತಿರುವುದನ್ನು ನಿಲ್ಲಿಸಬೇಕು ಮತ್ತು ಎಲ್ಲಾ ರೈತರಿಗೆ ಸಿ.ಫಾರಂ ಮಂಜುರು ಮಾಡಬೇಕು, ಮನೆ ಇಲ್ಲದೆ ಬಾಡಿಗೆ ಮನೆಗಳಲ್ಲಿ ವಾಸಿಸುವ ಎಲ್ಲಾ ವರ್ಗದವರಿಗೆ ನಿವೇಶನ ಮತ್ತು ಮನೆ ಮಂಜುರು ಮಾಡಬೇಕು, ಆಶಾ ಕಾರ್ಯಕರ್ತೆಯರಿಗೆ ಖಾಯಂ ನೌಕರರೆಂದು ಪರಿಗಣಿಸಿ 18 ಹದಿನೆಂಟು ಸಾವಿರ ರೂಪಾಯಿ ವೇತನ ನೀಡಬೇಕು ಮತ್ತು ಮುಂಬಡ್ತಿ ನೀಡಬೇಕು, ಬೀದರನಲ್ಲಿ ಸ್ಲಂ ಬೊರ್ಡನಿಂದ ಪ್ರಧಾನ ಮಂತ್ರಿ ಆವಾಸ್ ಯೋಜನೆಯಲ್ಲಿ ನಿರ್ಮಾಣವಾಗುತ್ತಿರುವ 750 ಮನೆಗಳು ನಿರ್ಮಾಣದಲ್ಲಿ ಭ್ರಷ್ಟಾಚಾರ ಮಾಡುತ್ತಿರುವ ಗುತ್ತಿಗೆದಾರರಿಗೆ ಕಪ್ಪು ಪಟ್ಟಿಗೆ ಸೇರಿಸಬೇಕು ಮತ್ತು ಉನ್ನತ ಮಟ್ಟದ ಅಧಿಕಾರಿಗಳಿಂದ ತನಿಖೆ ಮಾಡಿ ತಪ್ಪಿತಸ್ಥ ಅಧಿಕಾರಿಗಳಿಗೆ ನೌಕರಿಯಿಂದ ವಜಾ ಮಾಡಬೇಕು, ಸರ್ಕಾರಿ ಶಾಲೆಗಳು ಮುಚ್ಚಬಾರದು, ಕಲ್ಯಾಣ ಕರ್ನಾಟಕದಲ್ಲಿ ನಿರುದ್ಯೋಗ ಹೊಗಲಾಡಿಸಲು ಕೈಗಾರಿಕೆಗಳು ಸ್ಥಾಪಿಸಬೇಕು, ಅಂತರ್ಜಾತಿ ವಿವಾಹ, ಒಳ ಪಂಗಡ ವಿವಾಹ, ಸರಳ ಸಾಮೂಹಿಕ ವಿವಾಹ ಮಾಡಿಕೊಂಡ ಜೋಡಿಗಳಿಗೆ ತುರ್ತಾಗಿ ಪ್ರೋತ್ಸಾಹ ಧನ ಮಂಜುರು ಮಾಡಬೇಕು ಮತ್ತು ಪ್ರೋತ್ಸಾಹ ಧನ ಹೆಚ್ಚಳ, ಉದ್ಯೋಗಿನಿ ಸ್ವಯಂ ಉದ್ಯೋಗ ಸಾಲದ ಪ್ರೋತ್ಸಾಹ ಧನ ಹೆಚ್ಚಳ ಮಾಡಬೇಕು, ಅಸ್ಪೃಶ್ಯತೆ ನಿವಾರಣೆಗೆ ಕಾರ್ಯ ಯೋಜನೆ ರೂಪಿಸಬೇಕು, ಪ.ಜಾ.ಪ.ಪಂ ಓಣಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕೆಂದು ಒತ್ತಾಯಿಸಿದರು.

ಆರ್.ಪಿ.ಐ (ಅಂಬೇಡ್ಕರ್) ಪಕ್ಷದ ಜಿಲ್ಲಾಧ್ಯಕ್ಷ ಪ್ರಕಾಶ ರಾವಣ ಮಾತನಾಡುತ್ತ ಸಿದ್ಧರಾಮಯ್ಯ ಅನ್ನರಾಮಯ್ಯನೂ ಅಲ್ಲ, ದಲಿತರಾಮಯ್ಯನೂ ಅಲ್ಲ, ಅವರು ದಲಿತದ್ರೋಹಿರಾಮಯ್ಯರಾಗಿದ್ದಾರೆ. ಬಡವರ ದಲಿತರ ಹೆಸರು ಹೇಳಿಕೊಂಡು ಗೆದ್ದುಬಂದು ಒಳಮೀಸಲಾತಿ ಹೆಸರಿನಲ್ಲಿ ದಲಿತರಿಗೆ ದಿಕ್ಕು ತಪ್ಪಿಸುವ ಕಾರ್ಯ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು. ರಾಜ್ಯದ ಕಾಂಗ್ರೇಸ್ 60 ಪ್ರತಿಶತ ಕಮಿಷನ್ ಸರ್ಕಾರವಾಗಿದೆ. ಎಸ್‌ಇಪಿ ಟಿಎಸ್‌ಪಿ ಹಣವನ್ನು ದುರ್ಬಳಕೆ ಮಾಡಿಕೊಂಡು ದಲಿತರಿಗೆ ಅನ್ಯಾಯ ಮಾಡಲಾಗುತ್ತಿದೆ. ಗ್ಯಾರಂಟಿ ಯೋಜನೆ ಬಿಟ್ಟು ದುಡಿಯುವ ಕೈಗಳಿಗೆ ಉದ್ಯೋಗ ಕೊಡಿ. ಉಳುವವರಿಗೆ ಭೂಮಿ ಕೊಡಿ. ಈ ಬಾರಿ ಬಜೇಟ್‌ನಲ್ಲಿ ದಲಿತರ ಅಭಿವೃದ್ಧಿ ವಿಷಯದಲ್ಲಿ ತಾರತಮ್ಯ ಮಾಡಿದರೆ ಆರ್‌ಪಿಐ ಪಕ್ಷದ ವತಿಯಿಂದ ಹೋರಾಟ ಮಾಡುತ್ತೇವೆ ಎಂದು ತಿಳಿಸಿದರು. ಪಕ್ಷದ ರಾಜ್ಯ ಸಮಿತಿ ಸದಸ್ಯೆ ಗಂಗಮ್ಮಾ ಫುಲೆ ಮಾತನಾಡಿ ದಲಿತ ಮಹಿಳೆಯರ ಮೇಲೆ ಆಗುತ್ತಿರುವ ಅನ್ಯಾಯವನ್ನು ಸರ್ಕಾರ ತಡೆಯಬೇಕು. ತಪ್ಪಿತಸ್ಥರ ವಿರುದ್ಧ ಕ್ರಮ ಆಗುತ್ತಿಲ್ಲ. ತನಿಖೆಯೂ ಆಗುತ್ತಿಲ್ಲ. ದಲಿತರ ಓಣಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕು. ದುಶ್ಚಟಗಳಿಂದ ಯುವಕರು ಹಾಳಾಗುತ್ತಿರುವ ಕಾರಣ ಸಾರಾಯಿ, ಗುಟಖಾ ಬಂದ್ ಮಾಡಬೇಕೆಂದು ಸರ್ಕಾರಕ್ಕೆ ಆಗ್ರಹಿಸಿದರು. ಪತ್ರಿಕಾ ಗೋಷ್ಠಿಯಲ್ಲಿ ಪಕ್ಷದ ಕಲಬುರಗಿ ವಿಭಾಗೀಯ ಮಹಿಳಾ ಕಾರ್ಯಾಧ್ಯಕ್ಷೆ ಉಷಾಬಾಯಿ ಬನ್ಸುಡೆ, ಜಿಲ್ಲಾ ಮಹಿಳಾ ಪ್ರಧಾನ ಕಾರ್ಯದರ್ಶಿ ಶಶಿಕಲಾ ಶರ್ಮಾ, ಬೀದರ ಮಹಿಳಾ ತಾಲೂಕು ಅಧ್ಯಕ್ಷೆ ಸೊನಮ್ಮಾ ಕಸ್ತೂರೆ ಇದ್ದರು.

# ಕಾನೂನು ಸಲಹೆಗಾರರ ನೇಮಕಕ್ಕೆ ಅರ್ಜಿ ಆಹ್ವಾನ

**ರಾಯಚೂರು ಮಾ,6–** ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಭೂ ಸ್ವಾಧೀನ ಪ್ರಕರಣಗಳಿಗೆ ಸಂಬಂಧಿಸಿದ ವ್ಯಾಜ್ಯಗಳಲ್ಲಿ ಜಿಲ್ಲಾಧಿಕಾರಿಗಳಿಗೆ ಕಾನೂನಿನ ಸಲಹೆ ನೀಡಲು ಕಾನೂನು ಸಲಹೆಗಾರರನ್ನು ನೇಮಿಸಲು ಅರ್ಜಿ ಆಹ್ವಾನಿಸಲಾಗಿದೆ.

ಸರ್ಕಾರದ ಆದೇಶಗಳನ್ವಯ ಈ ಹಿಂದೆ ನೇಮಿಸಲಾದ ಕಾನೂನು ಸಲಹೆಗಾರರು ಹುದ್ದೆಗೆ ರಾಜೀನಾಮೆಯನ್ನು ನೀಡಿರುವುದರಿಂದ ಈ ಕಾರ್ಯಾಲಯದಿಂದ ಅಧಿಸೂಚನೆ ಹೊರಡಿಸಿ ಶ್ರೀ ಮಲ್ಲಿಕಾರ್ಜುನಗೌಡ, ನಿವೃತ್ತ ಜಿಲ್ಲಾ ಸಿವಿಲ್ ಮತ್ತು ಸತ್ರ ನ್ಯಾಯಾಧೀಶರು ಇವರನ್ನು ನೇಮಿಸಿ ಆದೇಶಿಸಲಾಗಿತ್ತು, ಆದರೆ ಸದರಿಯವರು ಕರ್ತವ್ಯಕ್ಕೆ ಹಾಜರಾಗಿರುವುದಿಲ್ಲ. ಕಾರಣ ಈ ಕಾರ್ಯಾಲಯದ ಕಾನೂನು ಸಲಹೆಗಾರರ ಹುದ್ದೆಯು ಖಾಲಿ ಇರುತ್ತದೆ.

ಜಿಲ್ಲಾಧಿಕಾರಿಗಳ ಕಚೇರಿಗಳಲ್ಲಿ ಕಂದಾಯ ಇಲಾಖೆಗೆ ಸಂಬಂಧಿಸಿದ ಭೂಕಂದಾಯ/ ಭೂಮಂಜೂರಾತಿ ನಿಯಮ/ ಭೂಸುಧಾರಣಾ/ ಭೂಸ್ವಾಧೀನ ಕಾಯ್ದೆ/ ನಿಯಮ ಇನ್ನಿತರ ಕಾಯ್ದೆ/ ನಿಯಮಗಳಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ಹಾಗೂ ಯಾವುದೇ ನ್ಯಾಯಾಲಯ ವ್ಯಾಜ್ಯಗಳ ಬಗ್ಗೆ ಕಾನೂನು ಸಲಹೆ ನೀಡಲು ಸೃಜಿಸಲಾಗಿರುವ ಕಾನೂನು ಸಲಹೆಗಾರರ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ನ್ಯಾಯಾಧೀಶರು/ ನಿವೃತ್ತ ಕಂದಾಯ ಇಲಾಖೆಯ ಅಧಿಕಾರಿ (ನಿವೃತ್ತ ವಿಶೇಷ ಜಿಲ್ಲಾಧಿಕಾರಿ) ಗಳಿಗೆ ಕರ್ತವ್ಯಗಳು, ಜವಾಬ್ದಾರಿಗಳನ್ನು ಮತ್ತು ಮೇಲಾಧಿಕಾರಿಗಳ ಸೂಚನೆಗಳು ಕಡ್ಡಾಯವಾಗಿ ಪಾಲಿಸುವ ಷರತ್ತಿಗೊಳಪಟ್ಟು ಕಾನೂನು ಸಲಹೆಗಾರರಿಗೆ ಒಂದು ನಿರ್ದಿಷ್ಟ ಏಕರೂಪದ ಸಂಚಿತ ವೇತನವನ್ನು ನಿಗಧಿಪಡಿಸಿ ಅಂತಹ ವೇತನದ ಮೇರೆಗೆ ಕಾನೂನು ಸಲಹೆಗಾರರಾಗಿ ಕಾರ್ಯನಿರ್ವಹಿಸಲು ಅಸಕ್ತಿಯುಳ್ಳ ನಿವೃತ್ತ ಸರ್ಕಾರಿ/ನ್ಯಾಯಾಂಗ ಇಲಾಖೆಯ ಅಧಿಕಾರಿಗಳನ್ನು ನಿವೃತ್ತ ನ್ಯಾಯಾಧೀಶರು/ ನಿವೃತ್ತ ಕಂದಾಯ ಇಲಾಖೆಯ ಅಧಿಕಾರಿ (ನಿವೃತ್ತ ವಿಶೇಷ ಜಿಲ್ಲಾಧಿಕಾರಿ) ಇವರಿಗೆ 70,000 ರೂ. ಹಾಗೂ ನಿವೃತ್ತ ಕಂದಾಯ ಇಲಾಖೆ ನೌಕರರು (ನಿವೃತ್ತ ತಹಶೀಲ್ದಾರ್ /ಉಪ ತಹಶೀಲ್ದಾರ್) ಇವರಿಗೆ 40,000 ರೂ. ಸಂಚಿತ ವೇತನವನ್ನು ಹಾಗೂ ನಿಗದಿಪಡಿಸಿ ಹೊರ ಗುತ್ತಿಗೆ ಆಧಾರದ ಮೇಲೆ ಈ ಕೆಳಕಂಡ ಷರತ್ತುಗಳನ್ವಯ ನೇಮಿಸಿಕೊಳ್ಳಲು ಉದ್ದೇಶಿಸಲಾಗಿದೆ.

ಅರ್ಹ ಮತ್ತು ಇಚ್ಚೆಯುಳ್ಳ ನಿವೃತ್ತ ಜಿಲ್ಲಾ ನ್ಯಾಯಧೀಶರು ಅಥವಾ ನಿವೃತ್ತ ಹಿರಿಯ ಸಿವಿಲ್ ನ್ಯಾಯಾಧೀಶರು, ನಿವೃತ್ತ ಕಂದಾಯ ಇಲಾಖೆಯ ಅಧಿಕಾರಿ (ನಿವೃತ್ತ ವಿಶೇಷ ಜಿಲ್ಲಾಧಿಕಾರಿ) ನಿವೃತ್ತ ಕಂದಾಯ ಇಲಾಖೆ (ನಿವೃತ್ತ ತಹಶೀಲ್ದಾರ್ /ಉಪ ತಹಶೀಲ್ದಾರ್) ರಿಂದ ಅರ್ಜಿಯನ್ನು ಈ ಅಧಿಸೂಚನೆ ಮೂಲಕ ಆಹ್ವಾನಿಸಲಾಗಿದೆ. ಈ ನೇಮಕಾತಿಯು ನೇಮಕಾತಿ ಆದೇಶದ ದಿನಾಂಕದಿಂದ ಒಂದು ವರ್ಷದ ಅವಧಿಯವರೆಗೆ ಉರ್ಜಿತವಾಗಿರುತ್ತದೆ. ಇಚ್ಚೆಯುಳ್ಳ ನಿವೃತ್ತ ಜಿಲ್ಲಾ ನ್ಯಾಯಧೀಶರು ಅಥವಾ ನಿವೃತ್ತ ಹಿರಿಯ ಸಿವಿಲ್ ನ್ಯಾಯಾಧೀಶರು, ನಿವೃತ್ತ ಕಂದಾಯ ಇಲಾಖೆಯ ಅಧಿಕಾರಿ (ನಿವೃತ್ತ ವಿಶೇಷ ಜಿಲ್ಲಾಧಿಕಾರಿ) ನಿವೃತ್ತ ಕಂದಾಯ ಇಲಾಖೆ (ನಿವೃತ್ತ ತಹಶೀಲ್ದಾರ್ /ಉಪ ತಹಶೀಲ್ದಾರ್) ಅರ್ಜಿಯನ್ನು ಮಾರ್ಚ್ 20ರೊಳಗಾಗಿ ಕಚೇರಿಯ ಸಮಯದೊಳಗಾಗಿ ರಾಯಚೂರು ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸಬಹುದಾಗಿದೆ. ಅವಧಿ ಮೀರಿದ ಅರ್ಜಿಗಳನ್ನು ಪುರಸ್ಕರಿಸಲಾಗವುದಿಲ್ಲವೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನ್ಹೇರಿ ಸ್ವಾಮಿ ಪಕ್ಕಾ ರಾಜಕಾರಣಿ ಭಾವಿ ಮುಖ್ಯಮಂತ್ರಿ: ಓಂಪ್ರಕಾಶ ರೊಟ್ಟೆ



**ಬೀದರ: ಮಾ.6:**ಸಂಘ ಪರಿವಾರ ಮತ್ತು ಭಾರತ ಸರ್ಕಾರದ ಸುಪ್ರಿಂ ಪಾವರ್ ಮೋಹನ ಭಾಗವತ್ ಅವರ ಪ್ರಚೋದನೆಯಿಂದ ಕನ್ಹೇರಿ ಸ್ವಾಮಿ ಬಸವ ಸಂಸ್ಕೃತಿ ಅಭಿಯಾನದ ರೂವಾರಿಗಳಿಗೆ ಅವಾಚ್ಯ ಶಬ್ದಗಳಿಂದ ಮಾತನಾಡುತ್ತಿದ್ದಾರೆ. ಕೂಡಲೇ ಇದನ್ನು ನಿಲ್ಲಿಸಬೇಕೆಂದು ಓಂಪ್ರಕಾಶ ರೊಟ್ಟೆ ಪ್ರತಿಪಾದಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಬಸವ ತತ್ವ ಪ್ರಚಾರಕರಾದ ನಿಜಗುಣಪ್ರಭು ಸ್ವಾಮಿಗಳು, ಸಾಣೆಹಳ್ಳಿ ಶ್ರೀಗಳು, ಭಾಲ್ಕಿಶ್ರೀಗಳು ಹಾಗೂ ಗದಗ ಶ್ರೀಗಳಿಗೆ ಬನಹಟ್ಟಿ ಸಮಾವೇಶದಲ್ಲಿ ಹೊಡಿ, ಬಡಿ ಕಡಿ ಶಬ್ದ ಬಳಸಿ ದ್ವೇಷದ ಭಾಷಣ ಮಾಡುತ್ತಿದ್ದಾರೆ. ಬಸವ ತತ್ವ ಪ್ರಚಾರಕರಿಗೆ ಬಸವ ತಾಲಿಬಾನಿಗಳೆಂದು ಹೇಳುವ ನೀವು ಯಾವ ತಾಲಿಬಾನಿಗಳು ಎಂಬುದು ಜನತೆಗೆ ತಿಳಿಸಬೇಕೆಂದು ಆಕ್ರೋಶ ಹೊರಹಾಕಿದರು. ತೊಟ್ಟ ಕಾವಿಯನ್ನು ಕಳಚಿ ಖಾದಿ ಧರಿಸಿ ಬಬಲೇಶ್ವರದಲ್ಲಿ ಎಂ.ಬಿ.ಪಾಟೀಲರ ವಿರುದ್ಧ ಚುನಾವಣೆಗೆ ಸ್ಪರ್ಧಿಸಲು ಕನ್ಹೇರಿ ಸ್ವಾಮಿ ಸಿದ್ಧರಾಗಬೇಕು. ಏಕೆಂದರೆ ಅಲ್ಲಿ ಈಗಾಗಲೇ ಕನ್ಹೇರಿ ಸ್ವಾಮಿ ಭಾವಿ ಸಿಎಂ ಎಂಬ ಕಟೌಗಳು ರಾರಾಜಿಸುತ್ತಿವೆ. ನೇರವಾಗಿ ರಾಜಕೀಯಕ್ಕೆ ಬಂದುಬಿಡಿ ಎಂದರಲ್ಲದೆ ಬಸವಾದಿ ಶರಣರಿಗೆ ವಧೆ ಮಾಡಿದವರಾರು ಎಂಬುದನ್ನು ಕನ್ಹೇರಿ ಸ್ವಾಮಿ ಉತ್ತರಿಸಬೇಕೆಂದು ರೊಟ್ಟೆ ಹೇಳಿದರು.

ಸಿಪಿಐ ಪಕ್ಷದ ಮುಖಂಡರಾದ ಬಾಬು ಹೊನ್ನಾನಾಯಕ್ ಮಾತನಾಡಿ ಮೂಢನಂಬಿಕೆ ವಿರುದ್ಧ ತಮ್ಮ ವಾಣಿ ಮೂಲಕ ಜಾಗೃತಿ ಮೂಡಿಸುತ್ತಿರುವ ನಿಜಗುಣಾನಂದ ಸ್ವಾಮಿಗಳ ಮೇಲೆ ದ್ವೇಷ ಕಾರುತ್ತಿರುವ ಕನ್ಹೇರಿ ಸ್ವಾಮಿ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳಬೇಕು. ನಿಜಗುಣಾನಂದ ಸ್ವಾಮಿಗಳು ಸೇರಿದಂತೆ ಬಸವ ತತ್ವ ಪ್ರಚಾರಕರಿಗೆ ಸರ್ಕಾರ ಭದ್ರತೆ ಒದಗಿಸಬೇಕು. ದಾಬೋಲ್ಕರ್, ಕಲಬುರಗಿ, ಪನ್ಸಾಲೆ, ಗೌರಿ ಲಂಕೇಶ್ ರೀತಿಯಲ್ಲಿ ಇವರ ಮೇಲೂ ಶಾರಿರಿಕ ದಾಳಿಯಾಗುವುದಿಲ್ಲ ಎನ್ನುವುದಕ್ಕೆ ಏನ್ ಗ್ಯಾರಂಟಿ ಎಂದು ಪ್ರಶ್ನೆ ಮಾಡಿದರು.

ಆಪಿಐ ಅಂಬೇಡ್ಕರ್ ಪಕ್ಷದ ರಾಜ್ಯ ಸಂಯೋಜಕ ಮಹೇಶ ಗೋರನಾಳಕರ್ ಮಾತನಾಡಿ ಬುದ್ಧ ಬಸವ ಅಂಬೇಡ್ಕರರ ತತ್ವ ಪ್ರಚಾರಕರ ಹಿಂದೆ ನಾವಿದ್ದೇವೆ. ಅವರನ್ನು ಮುಟ್ಟುವ ಮೊದಲು ನಮಗೆ ಮುಟ್ಟಬೇಕಾಗುತ್ತದೆ ಎಂದು ಕನೇರಿ ಶ್ರೀಗಳಿಗೆ ಎಚ್ಚರಿಕೆ ನೀಡಿದರು.

ಇದೇ ವೇಳೆ ಭಾರತೀಯ ಬಸವ ದಳದ ಜಿಲ್ಲಾಧ್ಯಕ್ಷ ಜಗದೀಶ್ವರ ಬಿರಾದಾರ ಮಾತನಾಡಿದರು. ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸಂಘದ ಅಧ್ಯಕ್ಷ ಸಂತೋಷ ಜೋಳದಾಪಕೆ, ಆಮ್ ಆದ್ಮಿ ಪಕ್ಷದ ಜಿಲ್ಲಾಧ್ಯಕ್ಷ ಸಿದ್ದು ಫುಲಾರಿ, ಪ್ರಗತಿಪರ ಹೋರಾಟಗಾರ ರಾಜಕುಮಾರ ಪಾಟೀಲ, ಅಂಬೇಡಕರ್ ತತ್ವ ಚಿಂತಕ ಪ್ರಕಾಶ ರಾವಣ ಸೇರಿದಂತೆ ಹಲವರಿದ್ದರು.

# ಐದು ದಿನಗಳ ಹಿಂದೆ ಕಾಣೆಯಾಗಿದ್ದ ವ್ಯಕ್ತಿ ಶವವಾಗಿ ಪತ್ತೆ : ಬಿರನಕಲ್ ತಾಂಡದಲ್ಲಿ ದುರ್ಘಟನೆ



ಯಾದಗಿರಿ:ಮಾ.6:ಜಿಲ್ಲೆಯ ವಡಗೇರಾ ತಾಲೂಕಿನ ಬಿರನಕಲ್ ತಾಂಡ ಗ್ರಾಮದ ಕ್ಯಾಂಪ್ ರಸ್ತೆಯ ಸಮೀಪ ಐದು ದಿನಗಳ ಹಿಂದೆ ಕಾಣೆಯಾಗಿದ್ದ ವ್ಯಕ್ತಿ ಇಂದು ಶವವಾಗಿ ಪತ್ತೆಯಾಗಿರುವ ದುರ್ಘಟನೆ ಜಿಲ್ಲೆಯಲ್ಲಿ ಆತಂಕ ಹಾಗೂ ಚರ್ಚೆಗೆ ಕಾರಣವಾಗಿದೆ.

ಮೃತ ವ್ಯಕ್ತಿಯನ್ನು ಧರ್ಮನಾಯಕ್ ಎಂದು ಗುರುತಿಸಲಾಗಿದೆ ಎಂದು ತಿಳಿದುಬಂದಿದೆ. ಇಂದು ಬೆಳಗಿನ ಜಾವ ಸ್ಥಳೀಯರು ಕ್ಯಾಂಪ್ ರಸ್ತೆಯ ಸಮೀಪದ ಪ್ರದೇಶದಲ್ಲಿ ಅನುಮಾನಾಸ್ಪದ ಪರಿಸ್ಥಿತಿಯಲ್ಲಿ ಶವ ಬಿದ್ದಿರುವುದನ್ನು ಗಮನಿಸಿ ತಕ್ಷಣವೇ ವಡಗೇರಾ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ಪೊಲೀಸರು ಪರಿಶೀಲನೆ ನಡೆಸಿ ಶವವನ್ನು ವಶಕ್ಕೆ ಪಡೆದು ಮುಂದಿನ ಕಾನೂನು ಕ್ರಮಗಳನ್ನು ಕೈಗೊಂಡಿದ್ದಾರೆ.

ಪೊಲೀಸರು ಸ್ಥಳ ಪರಿಶೀಲನೆ ನಡೆಸಿ ಸುತ್ತಮುತ್ತಲಿನ ಪ್ರದೇಶದಲ್ಲಿ ಮಾಹಿತಿ ಸಂಗ್ರಹಿಸುವ ಕಾರ್ಯ ಆರಂಭಿಸಿದ್ದು, ಘಟನೆಯ ಹಿನ್ನೆಲೆ ಹಾಗೂ ಸಾವಿನ ನಿಖರ ಕಾರಣವನ್ನು ಪತ್ತೆಹಚ್ಚಲು ವಿವಿಧ ಆಯಾಮಗಳಲ್ಲಿ ತನಿಖೆಯನ್ನು ತೀವ್ರಗೊಳಿಸಿದ್ದಾರೆ. ನಂತರ ಶವವನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಲಾಗಿದೆ ಎಂದು ತಿಳಿದುಬಂದಿದೆ.

ಗಮನಾರ್ಹ ಸಂಗತಿಯೆಂದರೆ, ಐದು ದಿನಗಳ ಹಿಂದೆ ಧರ್ಮನಾಯಕ್ ಅವರು ಕಾಣೆಯಾಗಿರುವ ಕುರಿತು ಅವರ ಪತ್ನಿ ಲಲಿತಾ ಅವರು ವಡಗೇರಾ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಗಂಡ ಮನೆಗೆ ಮರಳಿ ಬರುತ್ತಾನೆ ಎಂಬ ಅಪಾರ ನಿರೀಕ್ಷೆಯಲ್ಲಿ ದಿನಗಳನ್ನು ಕಳೆಯುತ್ತಿದ್ದ ಪತ್ನಿ ಹಾಗೂ ಕುಟುಂಬಸ್ಥರಿಗೆ ಇಂದು ಶವ ಪತ್ತೆಯಾದ ದುಃಖದ ಸುದ್ದಿ ತಿಳಿದು ಮನಕಲುಕುವ ಶೋಕ ವಾತಾವರಣ ನಿರ್ಮಾಣವಾಗಿದೆ.

ಈ ಘಟನೆ ಗ್ರಾಮಸ್ಥರಲ್ಲಿ ಆತಂಕವನ್ನು ಉಂಟುಮಾ ಡಿದ್ದು, ಸಾವಿನ ಹಿಂದೆ ಯಾವುದೇ ಅನುಮಾನಾಸ್ಪದ ಅಂಶಗಳಿವೆಯೇ ಎಂಬ ದಿಸೆಯಲ್ಲಿ ಪೊಲೀಸರು ಸಮಗ್ರ ತನಿಖೆ ಮುಂದು ವರೆಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದ ಹೆಚ್ಚಿನ ಮಾಹಿತಿ ತನಿಖೆ ಬಳಿಕವೇ ಸ್ಪಷ್ಟವಾಗಲಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

# ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ ನಶಾಮುಕ್ತ ಭಾರತ ಅಭಿಯಾನ: ರಾಯಚೂರು ಜಿಲ್ಲೆಯಲ್ಲಿ ಸಂಚಲನ

ಧೈರ್ಯದ ದಾರಿ

**ರಾಯಚೂರು ಮಾ.6–** ನಶಾ ಮುಕ್ತ ಭಾರತ, ನಶಾ ಮುಕ್ತ ಕರ್ನಾಟಕ, ನಶಾ ಮುಕ್ತ ಕ್ಯಾಂಪಸ್ ಸಂದೇಶದಡಿ ಮಾರ್ಚ 6ರಂದು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ ನಡೆದ ಬೃಹತ್ ವಾಕಥಾನ್ ರಾಯಚೂರು ನಗರದಲ್ಲಿ ಹೊಸ ಸಂಚಲನ ಮೂಡಿಸಿತು.

ವೈದ್ಯಕೀಯ ಶಿಕ್ಷಣದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ವಾಕಥಾನದಲ್ಲಿ ಭಾಗಿಯಾಗಿದ್ದು ವಿಶೇಷವಾಗಿತ್ತು.

ಬೆಳ್ಳಂ ಬೆಳಗ್ಗೆಯೇ, ಶಿಕ್ಷಣ ಸಂಸ್ಥೆಗಳ ಬಸ್‌ಗಳನ್ನು ಏರಿ ವಿದ್ಯಾರ್ಥಿಗಳು ತಂಡೋಪತಂಡವಾಗಿ ಪೊಲೀಸ್ ಫರೇಡ್ ಮೈದಾನದತ್ತ ಆಗಮಿಸಿದರು. ಬೃಹತ್ ವಾಕಥಾನ್‌ದಲ್ಲಿ ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ನವೋದಯ ಶಿಕ್ಷಣ ಸಂಸ್ಥೆ, ಸೆಂಟ್ರಲ್ ಸ್ಕೂಲ್, ಕೆಪಿಎಸ್‌ವಿಎಸ್ ಆಯುರ್ವೇದ ವೈದ್ಯಕೀಯ ಕಾಲೇಜು, ಪೂರ್ಣಿಮಾ ಆಯುರ್ವೇದಿಕ್ ಕಾಲೇಜ್, ಶಿಲ್ಪಾ ಮೆಡಿಕೇರ್, ನಂದಿನಿ ಮೆಡಿಕಲ್ ಕಾಲೇಜ್, ನವೋದಯ ದಂತ್ ಕಾಲೇಜ್, ವಿಎಲ್ ಕಾಲೇಜ್ ಆಫ್ ಫಾರ್ಮಸಿ ಸೇರಿದಂತೆ ಬೇರೆ ಬೇರೆ ಶಿಕ್ಷಣ ಸಂಸ್ಥೆಗಳ ಅಂದಾಜು 5000 ವಿದ್ಯಾರ್ಥಿಗಳು ಭಾಗಿಯಾಗಿದ್ದರು. ಇದೆ ವೇಳೆ, ಅಂಗಾಂಗ ಜಾಗೃತಿಯ ಅಭಿಯಾನವು ನಡೆಯಿತು.

ಪೂಜ್ಯರ ಆಗಮನದಿಂದ ಬಲ: ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಪೀಠಾಧಿಪತಿಗಳಾದ ಪರಮಪೂಜ್ಯ 108 ಶ್ರೀ ಸುಬುಧೇಂದ್ರ ತೀರ್ಥರು ರಾಯಚೂರು ನಗರಕ್ಕೆ ಆಗಮಿಸಿ ವಾಕಥಾನ್‌ದಲ್ಲಿ ಭಾಗಿಯಾಗಿ ಅಭಿಯಾನಕ್ಕೆ ಬಲ ತುಂಬಿದರು. ಜಿಲ್ಲಾ ಪೊಲೀಸ್ ಮೈದಾನದ ಆವರಣದಲ್ಲಿ ಆಯೋಜನೆಯಾಗಿದ್ದ ಕಾರ್ಯಕ್ರಮಕ್ಕೆ ಶ್ರೀಗಳು ಆಗಮಿಸುತ್ತಿದ್ದಂತೆ ನೆರೆದಿದ್ದ ವಿದ್ಯಾರ್ಥಿ ಸಮೂಹಕ್ಕೆ ಹೆಚ್ಚಿನ ಬಲ ಬಂದಿತು. ಬೃಹತ್ ವಾಕಥಾನ್‌ಗೆ ಶ್ರೀಗಳು ವಿದ್ಯುಕ್ತ ಚಾಲನೆ ನೀಡಿದರು. ಪೊಲೀಸ್ ಫರೇಡ್ ಮೈದಾನದಿಂದ ಸಾಲಾಗಿ ರಸ್ತೆಗಿಳಿದ ವಿದ್ಯಾರ್ಥಿಗಳು ಜನಜಾಗೃತಿಯ ಫಲಕಗಳನ್ನು ಕೈಯಲ್ಲಿ ಹಿಡಿದು ಸಾಗಿದರು. ದ್ವಿಚಕ್ರ ಸೇರಿದಂತೆ ಇನ್ನಿತರ ವಾಹನಗಳ ಸಂಚಾರಕ್ಕೆ ಅಡೆತಡೆಯಾಗುವಂತೆ ವಿದ್ಯಾರ್ಥಿಗಳು ಒಗ್ಗೂಡಿ ಬೀದಿಗಿಳಿದು ಜನಜಾಗೃತಿ ಮೂಡಿಸಿದ್ದು ವಿಶೇಷವಾಗಿತ್ತು.

ಗಮನ ಸೆಳೆದ ಫಲಕಗಳು: ನಿಮ್ಮ ಬದುಕು ಅಮೂಲ್ಯ ವ್ಯವಸಕ್ಕೆ ಬಲಿಯಾಗಬೇಡಿ., ಡ್ರಗ್ಸ್ ಅಂದರೆ ಸಾವಿನ ಬಲೆ, ಒಂದು ಸುಟ್ಟು ಹೋದ ಸೀಗರೇಟು ಹೇಳುತ್ತದೆ ಇವತ್ತು ನನ್ನ ಸಾವಿಗೆ ಕಾರಣ ನೀನು ನಾಳೆ ನಿನ್ನ ಸಾವಿಗೆ ಕಾರಣ ನಾನು., ನಶೆ ರಹಿತ ಜೀವನವೇ ನಿಜವಾದ ಸ್ವಾತಂತ್ರ., ನಶೆ ಮುಕ್ತ ಜೀವನ ಸಂತೃಪ್ತ ಜೀವನ., ಯುವರ್ ಲೈಫ್ ಈಸ್ ಪ್ರೀಸಿಯೆಸ್ ಡೋಂಟ್ ವೇಸ್ಟ್ ಇಟ್ ಆನ್ ಡ್ರಗ್ಸ್., ಬಿ ಸ್ಮಾರ್ಟ ಡೋಂಟ್ ಸ್ಟಾರ್ಟ ಡ್ರಗ್ಸ್ ಎನ್ನುವಂತಹ ಜನಜಾಗೃತಿ ಫಲಕಗಳು ವಾಕಥಾನ್ ವೇಳೆ ಗಮನ ಸೆಳೆದವು.

ಶ್ರೀಗಳ ಸಂದೇಶ: ಈ ವೇಳೆ ಶ್ರೀ ಸುಬುಧೇಂದ್ರ ತೀರ್ಥರು ಮಾತನಾಡಿ, ಸಾಮಾಜಿಕ ಚಟುವಟಿಕೆಗಳ ಜೊತೆಗೆ ಮನುಷ್ಯ ತನ್ನ ಜೀವನದ ಬಗ್ಗೆ ಸಹ ಹೆಚ್ಚಿನ ಗಮನ ಕೊಡಬೇಕು. ಕುಡಿತ, ಗಾಂಜಾ ಸೇವನೆ, ಸೀಗರೇಟ್ ಸೇವನೆಯಂತಹ ಕೆಟ್ಟ ಚಟಗಳಿಂದ ಪ್ರತಿಯೊಬ್ಬರು ದೂರ ಇರಬೇಕು. ನಶಮುಕ್ತನಾಗಿ ರುತ್ತೇನೆ ಎಂದು ಪ್ರತಿಯೊಬ್ಬರು ಸಂಕಲ್ಪ ಮಾಡಬೇಕು. ತನ್ನ ಸುತ್ತಲಿನವರಿಗೂ

ದುಶ್ಚಟಗಳಿಂದ ದೂರ ಇರುವಂತೆ ಸಲಹೆ ಮಾಡಬೇಕು ಎಂದು ತಿಳಿಸಿದರು. ಪ್ರಸ್ತುತ ದಿನಗಳಲ್ಲಿ ನಾವು ಹಣ ಕೊಟ್ಟು ರೋಗ–ರುಜಿನ ತೆಗೆದುಕೊಳ್ಳುತ್ತಿದ್ದೇವೆ?. 2018ರ ಅಂಕಿ–ಅಂಶಗಳ ಪ್ರಕಾರ ಜಗತ್ತಿನಲ್ಲಿ 30 ಕೋಟಿಗೂ ಹೆಚ್ಚು ಜನರು ಮಾದಕ ವ್ಯಸನಿಗಳಾಗಿದ್ದಾರೆ. ಅದರಲ್ಲಿ 10 ಕೋಟಿಯಷ್ಟು ಜನರು ಭಾರತೀಯರು ಎಂಬುದು ಆತಂಕಕಾರಿ ಸಂಗತಿ ಎಂದರು. ವ್ಯಸನ ಮುಕ್ತ ಸಮಾಜ ನಿರ್ಮಾಣ ಮಾಡಲು ಎಲ್ಲರೂ ಕೈಜೋಡಿಸಬೇಕು. ಜನಸಾಮಾನ್ಯರಿಗೆ ವಿದ್ಯಾವಂತರು ಜಾಗೃತಿ ಮೂಡಿಸುವ ಕಾರ್ಯವಾಗಬೇಕೆಂದರು.

ಜಿಲ್ಲಾಧಿಕಾರಿಗಳು ಭಾಗಿ: ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಭಾಗಿಯಾದರು. ಈ ವೇಳೆ ಅವರು ಮಾತನಾಡಿ, ರಾಯಚೂರು ಜಿಲ್ಲೆಗೆ ಈ ದಿನ ಒಂದು ಮಹತ್ವವಾದ ದಿನವಾಗಿದೆ ಎಂದು ಸೇರಿದ್ದ ವಿದ್ಯಾರ್ಥಿ ಸಮೂಹವನ್ನು ಕಂಡು ಅಭಿಯಾನದ ಪ್ರಯತ್ನಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕಾರ್ಯ ಅತ್ಯಂತ ಶ್ಲಾಘನೀಯವಾಗಿದೆ. ದೂರದ ಬೆಂಗಳೂರಿನಿಂದ ಇಲ್ಲಿಗೆ ಆಗಮಿಸಿ, ಎಲ್ಲ ಶಿಕ್ಷಣ ಸಂಸ್ಥೆಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಈ ರೀತಿ ಅರ್ಥಪೂರ್ಣ ಕಾರ್ಯಕ್ರಮ ಮಾಡಿದ್ದು ಸಮಾಜಮುಖಿ ಕಾರ್ಯವಾಗಿದೆ. ಈ ವಿಶ್ವವಿದ್ಯಾಲಯವು ಇದೆ ರೀತಿ ಜನಪಯೋಗಿ ಕಾರ್ಯಕ್ರಮಗಳನ್ನು ನಿರಂತರ ನಡೆಸಲಿ ಎಂದು ಆಶಿಸಿದರು.

ರಾಯಚೂರು ಗಡಿ ಹಂಚಿಕೊಂಡಿರುವುದರಿಂದ ಇಲ್ಲಿ ಡ್ರಗ್ಸ್ ಪದಾರ್ಥಗಳ ಸಾಗಣೆ, ಮಾರಾಟ ಸಾಧ್ಯತೆ ಇರುತ್ತದೆ. ಇಂತಹ ಜಾಲವನ್ನು ಹತ್ತಿಕ್ಕಲು ಪೊಲೀಸ್ ಇಲಾಖೆಯು ಸನ್ನದ್ಧವಾಗಿದೆ. ಯುವಕರನ್ನು ದಾರಿ ತಪ್ಪಿಸುವ ಯಾವುದೇ ಆಘಾತಕಾರಿ ಕೃತ್ಯಗಳಿಗೆ ನಾವು ಅವಕಾಶ ಕೊಡುವುದಿಲ್ಲ ಎಂದು ತಿಳಿಸಿದರು.

ಜಿಲ್ಲೆಯ ಯಾವುದೇ ಕಡೆಗಳಲ್ಲಿ ಡ್ರಗ್ಸ್ ಮಾರಾಟ ಅಥವಾ ಸೇವನೆಯ ಪ್ರಕರಣಗಳ ಜಾಲವು ಕಂಡುಬಂದಲ್ಲಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಜಿಲ್ಲಾಡಳಿತದ ಗಮನಕ್ಕೆ ತರಬೇಕು. ನಾವು ಪೊಲೀಸ್ ಇಲಾಖೆಯ ಮೂಲಕ ಅಂತಹ ಕೃತ್ಯವನ್ನು ಮಟ್ಟ ಹಾಕುತ್ತೇವೆ ಎಂದು ತಿಳಿಸಿದರು.

ಉತ್ತಮ ಸಂದೇಶದ ಪ್ರಯತ್ನ: ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಬಿ.ಸಿ.ಭಗವಾನ್ ಅವರು ಮಾತನಾಡಿ, ನಮ್ಮ ಸಮಾಜಕ್ಕಾಗಿ ಉತ್ತಮ ಸಂದೇಶವೊಂದನ್ನು ಕೊಡಬೇಕು. ನಮ್ಮ ವಿದ್ಯಾರ್ಥಿಗಳನ್ನು ನಾವು ಆರೋಗ್ಯವಂತರಾಗಿ ಮಾಡಿದರೆ ಮುಂದಿನ ಸಮಾಜ, ಮುಂದಿನ ಭಾರತ, ಮುಂದಿನ ಕರ್ನಾಟಕ ಹಾಗೂ ಮುಂದಿನ ರಾಯಚೂರು ಜಿಲ್ಲೆಯನ್ನು ಸದೃಢವಾಗಿ ಕಟ್ಟಲು ಸಾಧ್ಯ ಆಗುತ್ತದೆ. ಆ ದಿಶೆಯಲ್ಲಿ ಯೋಚಿಸಿ, ಯೋಜಿಸಿ ಈ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ ಎಂದು ತಿಳಿಸಿದರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಸುಮಾರು ಮೂರು ದಶಕಗಳ ಹಿಂದೆ ಪ್ರಾರಂಭವಾಗಿದ್ದು, ಸುಮಾರು 12 ಜಿಲ್ಲೆಗಳಲ್ಲಿ ನಶಾಮುಕ್ತ ಅಭಿಯಾನ ನಡೆಸಿದ್ದು ಸಾವಿರಾರು ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಭಾಗಿಯಾಗಿದ್ದಾರೆ. ವಿಶ್ವವಿದ್ಯಾಲಯ ಪ್ರತಿವರ್ಷವೂ ನೂರಕ್ಕೂ ಹೆಚ್ಚು ಚಿನ್ನದ ಪದಕಗಳನ್ನು ನೀಡುವ ಮೂಲಕ ಇಡೀ ದೇಶದಲ್ಲಿ ಅತ್ಯುತ್ತಮ ವಿಶ್ವವಿದ್ಯಾಲಯವಾಗಿ ಬೆಳೆದಿದೆ ಎಂದರು. ಕರ್ನಾಟಕ ರಾಜ್ಯ ಸರ್ಕಾರ, ಭಾರತ ಸರ್ಕಾರವು ನಮ್ಮ ಜೊತೆಗಿದೆ. ಜಿಲ್ಲೆಯ ಜನ ಪ್ರತಿನಿಧಿಗಳು ಸಂಪೂರ್ಣವಾಗಿ ಈ ಕಾರ್ಯಕ್ರಮವನ್ನು ಬೆಂಬಲಿಸಿದ್ದು, ಬಜೆಟ್ ಅಧಿವೇಶನ ಹಿನ್ನೆಲೆಯಲ್ಲಿ ಬೆಂಗಳೂರಿನಿಂದಲೇ ಎಲ್ಲ ಜನಪ್ರತಿನಿಧಿಗಳು ಈ ಕಾರ್ಯಕ್ರಮಕ್ಕೆ ಶುಭ ಕೋರಿದ್ದಾರೆ ಎಂದು ತಿಳಿಸಿದರು.

ಅಚ್ಚುಕಟ್ಟಾದ ಉಪಹಾರ ವ್ಯವಸ್ಥೆ: ಬೆಳಗ್ಗೆ ಪೊಲೀಸ್ ಫರೇಡ್ ಮೈದಾನದಿಂದ ಹೊರಟು ಎಪಿಎಂಸಿ ಸರ್ಕಲ್, ಬಸವೇಶ್ವರ ವೃತ್ತ, ಡಾ.ಬಿ.ಆರ್.ಅಂಬೇಡ್ಕರ್ ವೃತ್ತದ ಮಾರ್ಗವಾಗಿ ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣಕ್ಕೆ ವಾಕಥಾನ್ ಜಾಥಾದಡಿ ಆಗಮಿಸಿದ ವಿದ್ಯಾರ್ಥಿಗಳಿಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಅಚ್ಚುಕಟ್ಟಾಗಿ ಉಪಹಾರ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿತ್ತು.

ರಾಯಚೂರು ಜಿಲ್ಲಾ ವ್ಯಾಪ್ತಿಯ ರಾಜೀವ್ ಗಾಂಧಿ ಆರೋಗ್ಯ








ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕಕ್ಕೆ ಸಂಯೋಜನೆಗೊಳಪಟ್ಟಿರುವ ಕಾಲೇಜುಗಳ ಸಂಘ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕ ದಿಶಾಭೋದ್ ಫೌಂಢೇಶನ್ ಮತ್ತು ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ಇವರ ಸಹಯೋಗದೊಂದಿಗೆ ಸ್ವಾಸ್ಥ ಭಾರತ, ಶ್ರೇಷ್ಠ ಭಾರತ, ಯುವ ಶುದ್ಧಿ ಅಭಿಯಾನ ಅಂಗವಾಗಿ ಹಮ್ಮಿಕೊಂಡಿದ್ದ ವಾಕಥಾನ್ ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ, ರಾಯಚೂರು ರಿಮ್ಸ್ ಸಂಸ್ಥೆಯ ನಿರ್ದೇಶಕರಾದ ಡಾ.ರಮೇಶ ಬಿ.ಹೆಚ್., ನವೋದಯ ಮೆಡಿಕಲ್ ಸಂಸ್ಥೆಯ ಮುಖ್ಯಸ್ಥರಾದ ಎಸ್.ಆರ್.ರೆಡ್ಡಿ, ಈಶ್ವರಿ ವಿಶ್ವವಿದ್ಯಾಲಯದ ಬಿ.ಕೆ.ಸ್ಮಿತಾ ಅಕ್ಕನವರು, ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ನಿರೀಕ್ಷಕರಾದ ವಿಕಾಸ್ ಸಿಂಗ್, ದಿಶಾಭೋದ್ ಫೌಂಡೇಶನ್ ಡಾ.ಹರ್ಷ ಹರ್ದಾರ್, ಎಸ್.ಪಿ.ಚಿದಾನಂದ್, ನವೋದಯ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾದ ಡಾ.ದೇವಾನಂದ, ಹೃದ್ರೋಗ ತಜ್ಞರು ಹಾಗೂ ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಪ್ರಭಾರಿ ವಿಶೇಷಾಧಿಕಾರಿ ಡಾ.ಮುರಳಿ ರಾವ್, ಪೂರ್ಣಿಮಾ ಆಯುರ್ವೇದ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಚಂದ್ರಶೇಖರ ರೆಡ್ಡಿ, ನವೋದಯ ದಂತ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಗಿರೀಶ್ ಕಟ್ಟಿ ಸೇರಿದಂತೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿಕಾರಿಗಳು, ಸಿಬ್ಬಂದಿ ವರ್ಗ, ಸೆನೆಟ್, ಸಿಂಡಿಕೇಟ್, ಅಕೆಡೆಮಿಕಲ್ ಕೌನ್ಸಿಲ್ ಸದಸ್ಯರು ಹಾಗೂ ವಿವಿಧ ಕಾಲೇಜುಗಳ ಆಡಳಿತ ಮಂಡಳಿ, ಅಧ್ಯಕ್ಷರು, ಪ್ರಾಂಶುಪಾಲರು ಮತ್ತು ಸಿಬ್ಬಂದಿಗಳು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಬೆಂಗಳೂರನ್ನು ವಿಶ್ವಮಾನ್ಯ ನಗರವನ್ನಾಗಿಸಲು ಸಾವಿರಾರು ಕೋಟಿ ರೂ. ವಿನಿಯೋಗ

ಬೆಂಗಳೂರು, ಮಾ.6–ಬಿಬಿಎಂಪಿ ನಂತರ ರಚನೆ ಮಾಡಲಾಗಿರುವ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಐದು ನಗರ ಪಾಲಿಕೆಗಳ ಅಭಿವೃದ್ಧಿಗೆ 7 ಸಾವಿರ ಕೋಟಿ ರೂ.ಗಳ ಅನುದಾನ ನೀಡುವುದರ ಜೊತೆಗೆ ವಿಶ್ವದ ಅತ್ಯುತ್ತಮ ವಾಸಯೋಗ್ಯ ನಗರವನ್ನಾಗಿ ಮಾಡಲು ಸಾವಿರಾರು ಕೋಟಿ ರೂ. ಖರ್ಚು ಮಾಡಲು ನಮ ಸರ್ಕಾರ ಸಿದ್ಧವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ.

ಪ್ರಸಕ್ತ ಸಾಲಿನ ದಾಖಲೆಯ ಬಜೆಟ್ ಮಂಡನೆ ವೇಳೆ ಮುಖ್ಯಮಂತ್ರಿಗಳು, ಬೆಂಗಳೂರು ಒಂದು ನಗರವಷ್ಟೆ ಅಲ್ಲ. ಇದು ಅಸಂಖ್ಯಾತ ಕನಸುಗಳ ನೆಲೆಬೀಡು. ನಾಡ ಪ್ರಭು ಕೆಂಪೇಗೌಡರ ಆಡಳಿತದಿಂದ ಹಿಡಿದು ಇಂದಿನ ಸ್ಟಾರ್ಟ್‌ಅಪ್ ಕ್ರಾಂತಿಯವರೆಗೆ ಈ ನಗರ ತನ್ನದೇ ಆದ ವೈಶಿಷ್ಟ್ಯತೆಗಳನ್ನು ಹೊಂದಿದೆ. ಇಂತಹ ನಗರವನ್ನು ವಿಶ್ವದ ಅತ್ಯುತ್ತಮ ವಾಸಯೋಗ್ಯ ನಗರವನ್ನಾಗಿಸಲು ನಮ ಸರ್ಕಾರ ಉದ್ದೇಶಿಸಿದೆ ಎಂದರು.

ಬೆಂಗಳೂರು ಅಭಿವೃದ್ಧಿಗೆ ಈ ಹಿಂದೆ 3000 ಕೋಟಿ ರೂ.ಗಳನ್ನು ನೀಡಲಾಗುತ್ತಿತ್ತು. ಆದರೆ, ಕಳೆದ ಬಜೆಟ್‌ನಲ್ಲಿ ನಮ ಸರ್ಕಾರ ಆ ಅನುದಾನವನ್ನು 7000 ಕೋಟಿ ರೂ.ಗಳಿಗೆ ಹೆಚ್ಚಿಸಿತ್ತು. ಈ ಬಾರಿಯೂ ಜಿಬಿಎ ಅಭಿವೃದ್ಧಿ ದೃಷ್ಟಿಯಿಂದ ನಾವು 7 ಸಾವಿರ ಕೋಟಿ ರೂ.ಗಳ ಅನುದಾನ ನೀಡುತ್ತಿದ್ದೇವೆ ಎಂದು ಅವರು ಮಾಹಿತಿ ನೀಡಿದರು.

ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳಲ್ಲಿ ವಾರ್ಡ್ ರಸ್ತೆ ಮತ್ತು ಮೂಲ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗಾದಿ 1255 ಕೋಟಿ ರೂ. ವೆಚ್ಚ ಮಾಡಲಿದ್ದೇವೆ. 1700 ಕೋಟಿ ರೂ. ವೆಚ್ಚದಲ್ಲಿ ನಗರದ 158 ಕಿ.ಮೀ ಉದ್ದದ ರಸ್ತೆಯನ್ನು ವೈಟ್ ಟಾಪಿಂಗ್ ರಸ್ತೆಗಳನ್ನಾಗಿ ಪರಿವರ್ತಿಸುತ್ತೆ?ವೆ. 1936 ಕೋಟಿ ರೂ. ವೆಚ್ಚದಲ್ಲಿ ಮುಖ್ಯ ಹಾಗೂ ಉಪ ಮುಖ್ಯ ರಸ್ತೆಗಳನ್ನು ಅಭಿವೃದ್ಧ ಮಾಡುವ ನಿರ್ಧಾರ ಮಾಡಿದ್ದೇವೆ ಎಂದರು.

ಸಿಲ್ಕ್ ಬೋರ್ಡ್ ಜಂಕ್ಷನ್‌ನಿಂದ ಕೆ.ಆರ್.ಪುರಂ ಮೆಟ್ರೊ ನಿಲ್ದಾಣದವರೆಗೆ ಹೊರ ವರ್ತುಲ ರಸ್ತೆಯನ್ನು ಅಭಿವೃದ್ಧಿ ಪಡಿಸುವ ಯೋಜನೆಗೆ 450 ಕೋಟಿ ರೂ.ಗಳನ್ನು ಮೀಸಲಿಟ್ಟಿದ್ದೇವೆ. ಅದೇ ರೀತಿ 273 ಕೋಟಿ ರೂ.ವೆಚ್ಚದಲ್ಲಿ ರಾಜಕಾಲುವೆಗಳನ್ನು ಮೇಲ್ದರ್ಜೆಗೇರಿಸುವುದರ ಜೊತೆಗೆ ಕೆರೆಗಳ ಅಭಿವೃದ್ಧಿ ಕಾಮಗಾರಿ ಹಮಿಕೊಳ್ಳುತ್ತಿದ್ದೇವೆ ಎಂದು ಸಿಎಂ ತಿಳಿಸಿದ್ದಾರೆ.


ರಸ್ತೆಗಳ ಧೀರ್ಘಕಾಲದ ಬಾಳಿಕೆಗಾಗಿ ಮುಂದಿನ ಮೂರು ವರ್ಷಗಳಲ್ಲಿ 450 ಕಿ.ಮೀಗೂ ಹೆಚ್ಚು ಉದ್ದದ ರಸ್ತೆಗಳನ್ನು 3000 ಕೋಟಿ ರೂ.ಗಳಲ್ಲಿ ವೈಟ್ ಟಾಪಿಂಗ್ ಮಾಡಲು ತೀರ್ಮಾನಿಸಿದ್ದೇವೆ.

ನಗರ ಪಾಲಿಕೆಗಳ ಸ್ವಂತ ಸಂಪನೂಲಗಳಿಂದ ಮುಂದಿನ ಮೂರು ವರ್ಷಗಳಲ್ಲಿ 175 ಜಂಕ್ಷನ್‌ಗಳನ್ನು ಸೌಂದರ್ಯೀಕರಣಗೊಳಿಸಿ 500 ಕಿ.ಮೀ ಉದ್ದದ ಪಾದಚಾರಿ ಮಾರ್ಗಗಳನ್ನು ಮೇಲ್ದರ್ಜೆಗೇರಿಸಲು ಮತ್ತು 100 ಸ್ಕೈ ವಾಕ್‌ಗಳನ್ನು ನಿರ್ಮಾಣ ಮಾಡಲು ನಿರ್ಧರಿಸಲಾಗಿದೆ.

ವಿಶ್ವಬ್ಯಾಂಕ್ ನೆರವಿನಲ್ಲಿ ಜಲ ಭದ್ರತೆ ಮತ್ತು ವಿಪತ್ತು ನಿರೋಧಕ ಕಾರ್ಯಕ್ರಮ ರೂಪಿಸಿ ರಾಜಕಾಲುವೆಗಳ ಅಭಿವೃದ್ಧಿಗೆ 2000 ಕೋಟಿ ರೂ.ಗಳ ಕಾಮಗಾರಿಗೆ ಟೆಂಡರ್ ಕರೆದು ಅನುಷ್ಠಾನಗೊಳಿಸಲು ಪ್ಲಾನ್ ಹಾಕಿಕೊಳ್ಳಲಾಗಿದೆ.

ಹಣ ಸಂಗ್ರಹಕ್ಕೆ ಮುನ್ಸಿಪಲ್ ಬಾಂಡ್: ಐದು ನಗರ ಪಾಲಿಕೆಗಳ ಬ್ಯಾಲೆನ್ಸ್ ಶೀಟ್ ಆಧಾರದ ಮೇಲೆ ಮುನಿಸಿಪಲ್ ಬಾಂಡ್‌ಗಳ ಮೂಲಕ ಸಂಪನೂಲ ಕ್ರೋಢಿಕರಣಕ್ಕೆ ಇದೇ ಮೊದಲ ಬಾರಿಗೆ ಕ್ರಮ ಕೈಗೊಳ್ಳಲಾಗಿದೆ. 2027ರ ಅಂತ್ಯದೊಳಗೆ ಬೆಂಗಳೂರಿನ ಹೊಸ ಪರಿಷ್ಕೃತ ಮಾಸ್ಟರ್ ಪ್ಲಾನ್ ಜಾರಿಗೊಳಿಸಿ, ಅದರ ಜೊತೆಗೆ ಸಮಗ್ರ ಮೊಬಿಲಿಟಿ ಯೋಜನೆ ರೂಪಿಸಲಾಗುತ್ತಿದೆ ಎಂದು ಸಿಎಂ ಘೋಷಿಸಿದರು.

ಮೆಟ್ರೊ ಮಾರ್ಗ ವಿಸ್ತರಣೆ;ಪ್ರಸ್ತುತ ಇರುವ 96 ಕಿ.ಮೀಗಳ ಮೆಟ್ರೊ ಜಾಲದಿಂದ 10 ಲಕ್ಷ ಪ್ರಯಾಣಿಕರಿಗೆ ಅನುಕೂಲವಾಗುತ್ತಿದೆ. ಹೀಗಾಗಿ ನಮ ಸರ್ಕಾರ ಮೆಟ್ರೊ ವಿಸ್ತರಣೆ ಮಾಡಲು ತೀರ್ಮಾನಿಸಿದ್ದು ಪ್ರಸಕ್ತ ಹಣಕಾಸು ವರ್ಷದಲ್ಲಿ 41 ಕಿ.ಮೀ ಉದ್ದದ ಮೆಟ್ರೊ ಜಾಲ ವಿಸ್ತರಣೆ ಮಾಡಲು ತೀರ್ಮಾನಿಸಿದ್ದೇವೆ ಎಂದು ಅವರು ಹೇಳಿದರು.




ನಮ ಈ ಮಹತ್ವದ ನಿರ್ಧಾರದಿಂದ ಪ್ರಸ್ತುತ ಸಂಚರಿಸುತ್ತಿರುವ 10 ಲಕ್ಷ ಮೆಟ್ರೊ ಪ್ರಯಾಣಿಕರ ಸಂಖ್ಯೆ 15 ಲಕ್ಷಕ್ಕೆ ಏರಿಕೆಯಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿವರಿಸಿದರು. ಹೊರ ವರ್ತುಲ ರಸ್ತೆಯ ಮೆಟ್ರೊ ವಯಾಡಕ್ಟ್ ಉದ್ದಕ್ಕೂ 9 ಕಿ.ಮೀ ಉದ್ದದ ಪಾದಚಾರಿ ನಡಿಗೆ ಮಾರ್ಗಗಳನ್ನು ಹೊರ ವರ್ತುಲ ಕಂಪನಿಗಳ ಸಂಘದ ಪ್ರಯೋಜಕತ್ವದಲ್ಲಿ 160 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಿದ್ದೇವೆ ಎಂದು ಅವರು ಹೇಳಿದರು.

ಕಾವೇರಿ ಆರನೇ ಹಂತದ ಯೋಜನೆ ಜಾರಿ; ನಗರದ ಕುಡಿಯುವ ನೀರಿನ ಬವಣೆ ತಪ್ಪಿಸುವ ಉದ್ದೇಶದಿಂದ ನಮ ಸರ್ಕಾರ ಕಾವೇರಿ ಆರನೇ ಹಂತದ ಯೋಜನೆಯನ್ನು ಜಾರಿಗೊಳಿಸಲಿದ್ದೇವೆ. ಈ ಯೋಜನೆ ಜಾರಿಗಾಗಿ ಜೀಕಾ ನೆರವಿನಿಂದ 6939 ಕೋಟಿ ರೂ. ವೆಚ್ಚದಲ್ಲಿ ಹೆಚ್ಚುವರಿ ಆರು ಟಿಎಂಸಿ ನೀರು ಪೂರೈಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಬಿಸಿನೆಸ್ ಕಾರಿಡಾರ್; ನಗರದ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲು ತುಮಕೂರು ರಸ್ತೆಯಿಂದ ಹೊಸೂರು ರಸ್ತೆಯವರೆಗಿನ 73 ಕಿ.ಮೀ ಉದ್ದದ ಬೆಂಗಳೂರು ಬಿಸಿನೆಸ್ ಕಾರಿಡಾರ್ ಭಾಗ–1 ನಿರ್ಮಾಣ ಮಾಡುತ್ತಿದ್ದೇವೆ. ಈ ಯೋಜನೆಗಾಗಿ ಭೂ ಸ್ವಾಧೀನ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಮುಂದಿನ ನಾಲ್ಕು ವರ್ಷದಲ್ಲಿ ಯೋಜನೆ ಪೂರ್ಣಕ್ಕೆ ಗುರಿ ಇರಿಸಿಕೊಂಡಿದ್ದೇವೆ ಎಂದು ಅವರು ತಿಳಿಸಿದರು.

ಸುರಂಗಮಾರ್ಗ ರಸ್ತೆ ; ಇದರ ಜೊತೆಗೆ ಹೆಬ್ಬಾಳ ಜಂಕ್ಷನ್‌ನಿಂದ ಸಿಲ್ಕ್‌ಬೋರ್ಡ್‌ವರೆಗಿನ ಉತ್ತರ–ದಕ್ಷಿಣ ಕಾರಿಡಾರ್ ಯೋಜನೆ ಹಾಗೂ ಕೆ.ಆರ್‌ಪುರಂನಿಂದ ಮೈಸೂರು ರಸ್ತೆವರೆಗಿನ ಪೂರ್ವ–ಪಶ್ಚಿಮ ಕಾರಿಡಾರ್ ಯೊಜನೆಯಲ್ಲಿ ಒಟ್ಟು 40 ಕಿ.ಮೀ ಉದ್ದದ ಸುರಂಗ ಮಾರ್ಗ ರಸ್ತೆ ನಿರ್ಮಿಸಲು 40 ಸಾವಿರ ಕೋಟಿ ರೂ. ವೆಚ್ಚ ಮಾಡುತ್ತಿದ್ದೇವೆ. ಮೊದಲ ಹಂತದಲ್ಲಿ 17 ಕಿ.ಮೀ ಉದ್ದದ ಸುರಂಗ ರಸ್ತೆಯನ್ನು 17780 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲು ಟೆಂಡರ್ ಕರೆಯಲಾಗಿದೆ ಎಂದರು.

ಹೆಬ್ಬಾಳ ಜಂಕ್ಷನ್‌ನಿಂದ ಮೇಖ್ರಿ ಸರ್ಕಲ್‌ವರೆಗಿನ ಟನಲ್ ರೋಡ್ ಹಾಗೂ ಎಲಿವೇಟೇಡ್ ರಸ್ತೆ ನಿರ್ಮಾಣಕ್ಕೆ ಬಿಡಿಎ ವತಿಯಿಂದ 2250 ಕೋಟಿ ರೂ.ಗಳನ್ನು ಬಳಕೆ ಮಾಡಲಾಗುತ್ತಿದೆ ಇದರ ಜೊತೆಗೆ ನಗರದ ದಟ್ಟಣೆ ಕಡಿಮೆ ಮಾಡಲು ನೆಲಮಂಗಲ–ತಾವರೆಕೆರೆ– ಬಿಡದಿ ಮಧ್ಯಂತರ ವರ್ತುಲ ರಸ್ತೆಯನ್ನು ಬಿಎಂಆರ್‌ಡಿಎ ಸಹಕಾರದಿಂದ ನಿರ್ಮಿಸಲು ತೀರ್ಮಾನಿಸಿದ್ದೇವೆ ಎಂದು ಸಿಎಂ ಹೇಳಿದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE